

# ಸಿಹಿ ಕಹಿ


ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
SK NEWS ಕನ್ನಡ
SIHI KAHI
KANNADA DAILY MORNING
BAGALKOT



ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor : MARUTI BASAVANTAPPA HOSAMANI
Cell : +91 9741319119



RNI REG No. : KARKAN/2016/75068
Volume : 07 Issue : 112 Saturday 04-01-2025 E-mail : maruti.b.hosamani76@gmail.com Page: 4 Price : Rs. 1/-


## ಜ್ಞಾನ ವಿಕಾಸ ಕಾರ್ಯಕ್ರಮ ದಡಿಯಲ್ಲಿ ವಾತ್ಸಲ್ಯ ಮನೆ ರಚನೆ ಕಾರ್ಯಕ್ರಮದ ಭೂಮಿ ಪೂಜೆ



**ನರೇಗಲ್ :** ರೋಣ ತಾಲೂಕಿನ ನರೇಗಲ್ ವಲಯದ ಕೊಚಲಾಪುರ ಕಾರ್ಯ ಕ್ಷೇತ್ರದಲ್ಲಿ ಲಕ್ಷ್ಮಮ್ಮ ಮುಂಡರಗಿ ಇವರಿಗೆ ಜ್ಞಾನ ವಿಕಾಸ ಕಾರ್ಯಕ್ರಮದಡಿಯಲ್ಲಿ ವಾತ್ಸಲ್ಯ ಮನೆ ರಚನೆ ಕಾರ್ಯಕ್ರಮದ ಭೂಮಿ ಪೂಜೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಕಾರ್ಯಕ್ರಮದಲ್ಲಿ ತಾಲೂಕಿನ ಯೋಜನಾ ಅಧಿಕಾರಿಗಳಾದ ಮಹಾಬಲೇಶ್ವರ್ ಸರ್ ಉಪಸ್ಥಿತರಿದ್ದು ಮಾತೋಶ್ರೀ ಹೇಮಾವತಿ ಅಮ್ಮನವರ ವಾತ್ಸಲ್ಯ ಕಾರ್ಯಕ್ರಮದ ಕಲ್ಪನೆಯನ್ನು ತಿಳಿಸಿದರು.

ಕುಟುಂಬದ ಕಟ್ಟ ಕಡೆಯ ವ್ಯಕ್ತಿಯನ್ನು ಆಯ್ಕೆ ಮಾಡಿ ಅವರ ದಿನ ನಿತ್ಯದ ಊಟ ಮತ್ತು ಬಟೆ-ಗೆ ಅನುಕೂಲವಾಗುವಂತೆ ಮಾಶಾಸನವನ್ನು ಕೊಡುವುದಲ್ಲದೆ ಅವರ ಪರಿಸ್ಥಿತಿಯನ್ನು ಗುರುತಿಸಿ ಕೊಂಡು ಮನೆ ಇಲ್ಲದವರಿಗೆ ಮನೆಯನ್ನು ನಿರ್ಮಿಸಿ ಕೊಡುವ ಕಾರ್ಯಕ್ರಮ ರಾಜ್ಯದ್ಯಂತ ಮಾಡುತ್ತಿದ್ದು ನೊಂದ ಜೀವಿಗಳಿಗೆ ಆಸರಿಯಾಗುವ ಕಾರ್ಯಕ್ರಮವಾಗಿದೆ ಎಂದು ವಿವರವಾಗಿ ತಿಳಿಸಿದರು.

ಜೊತೆಗೆ ಯೋಜನೆಯಿಂದ ಸಿಗುವ ಸೌಲಭ್ಯದ ಬಗ್ಗೆ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಊರಿನ ಗಣ್ಯರಾದ ಶರಣಪ್ಪ ಅಯ್ಯನಗೌಡ ಪ್ರಕಾಶ್ ರೆಡ್ಡಿರ ಕಳಕಪ್ಪ ಮಾಲ್ಗಿತ್ತಿ ಮತ ಕಾಸಿಂ ಸಾಬ್ ನರಗುಂದ ಜ್ಞಾನ ವಿಕಾಸ ಸಮನ್ವ ಅಧಿಕಾರಿಯಾದ ಅಶ್ವಿನಿ.ಪಿ ಎಂ ವಲಯದ ಮೇಲ್ವಿಚಾರಕರಾದ ಸುಮಾ ಹಿರೇಮತ್ ಸೇವಾ ಪ್ರತಿ ನಿಧಿಯಾದ ಆಶಾ ಗೌರಿಮಠ ಬಸಮ್ಮ ಮಾಲಗಿತ್ತಿ ಮಠ ಸ್ವ ಸಹಾಯ ಸಂಘದ ಸದಸ್ಯರು ಗ್ರಾಮಸ್ಥರ ಉಪಸ್ಥಿತಿಯಲ್ಲಿ ಕಾರ್ಯಕ್ರಮ ನೆರವೇರಿತು.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಎಸ್.ವಿ ಸಂಕನಗೌಡ್ರ ರೋಣ ಗದಗ**

## ಅಮರ ಶಿಲ್ಪಿ ಜಾಕಣಾಚಾರಿ ಜಯಂತಿ ಹಾಗೂ ಸೋಮಣ್ಣ ತಾತ ಹುಟ್ಟು ಹಬ್ಬದ ಅಂಗವಾಗಿ ಸಸಿ ನೆಟ್ಟ ವನಸಿರಿ ತಂಡ

**ಸುಲ್ತಾನಾಪೂರ :** ರಾಯಚೂರು ಜಿಲ್ಲೆಯ ಸಿಂಧನೂರು ತಾಲೂಕಿನ ಸುಲ್ತಾನಾಪೂರ ಗ್ರಾಮದಲ್ಲಿ ವನಸಿರಿ ಫೌಂಡೇಷನ್ ಹಾಗೂ ಸಿಂಧನೂರು ತಾಲೂಕ ವಿಶ್ವಕರ್ಮ ಸಮಾಜದ ವತಿಯಿಂದ ಶ್ರೀ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮ, ವನಸಿರಿ ಫೌಂಡೇಷನ್ ಸುಲ್ತಾನಾಪೂರ ಗ್ರಾಮ ಘಟಕ ಉದ್ಘಾಟನೆ ಹಾಗೂ ಸೋಮಣ್ಣ ತಾತ ಸುಲ್ತಾನಾಪೂರ ಅವರ ಹುಟ್ಟು ಹಬ್ಬ ಕಾರ್ಯಕ್ರಮ ಅಂಗವಾಗಿ "ಸಸಿ ನೆಡುವ ಕಾರ್ಯಕ್ರಮ" ಹಮ್ಮಿಕೊಳ್ಳಲಾಯಿತು.



ಇದೇ ಸಂಧರ್ಭದಲ್ಲಿ ವನಸಿರಿ ಫೌಂಡೇಷನ್ ಸುಲ್ತಾನಾಪೂರ ಗ್ರಾಮ ಘಟಕದ ಪದಾಧಿಕಾರಿಗಳನ್ನು ನೇಮಕ ಮಾಡಿ ಶಾಲು ಹಾಕಿ ಸನ್ಮಾನಿಸಿ ಪ್ರಮಾಣ ಪತ್ರ ನೀಡಲಾಯಿತು.

ಈ ಸಂಧರ್ಭದಲ್ಲಿ ಪರಿಸರ ರಾಜ್ಯ ಪ್ರಶಸ್ತಿ ಪುರಸ್ಕೃತರು, ವನಸಿರಿ ಫೌಂಡೇಷನ್ ಅಧ್ಯಕ್ಷ ಅಮರೇಗೌಡ ಮಲ್ಲಾಪೂರ, ವಿಶ್ವಕರ್ಮ ಸಮಾಜದ ತಾಲೂಕ ಅಧ್ಯಕ್ಷ ಮೌನೇಶ ತಿಡಿಗೋಳ, ಅಂಬಣ್ಣ ಗೊರೇಬಾಳ, ಸೋಮಣ್ಣ ತಾತ ವಿರೂಪಣ್ಣ ತಾತ, ಮಂಜುನಾಥ ಬಡಿಗೇರ, ಸುರೇಶ ಗೊಬ್ಬರಕಲ್ಲು ತಾಲೂಕ ಅಧ್ಯಕ್ಷ ಕರ್ನಾಟಕ ರಕ್ಷಣಾ ವೇದಿಕೆ (ಶಿವರಾಮೇಗೌಡ ಬಣ) ರಾಜು ಪತ್ತಾರ ಬಳಗಾನೂರು, ಚನ್ನಪ್ಪ ಕೆ ಹೊಸಹಳ್ಳಿ, ಮುದಿಯಪ್ಪ ಹೊಸಳ್ಳಿ ಕ್ಯಾಪ್, ಬದ್ರಿನಾಥ ತಿಮ್ಮಾಪೂರ, ವನಸಿರಿ ಗ್ರಾಮ ಘಟಕದ ಪದಾಧಿಕಾರಿಗಳಾದ ಡಾ, ಮುತ್ತಣ್ಣ ಕೆ, ಶಿವು ಕಂಬಳಿ, ಮಲ್ಲಿಕಾರ್ಜುನ ಕೆ, ಪ್ರಕಾಶ ಅಂಗಡಿ, ಗಣೇಶ ಅಂಗಡಿ, ಅಮರೇಶ ಕೆ, ಬಸವ ನಾಯಕ, ಅಮರೇಶ ನಾಯಕ, ಚನ್ನಪ್ಪ ಭೋವಿ, ಸಿದ್ಧಲಿಂಗಪ್ಪ ಮಾನೇಗರ, ಶಂಕ್ರಪ್ಪ ಭೋವಿ, ಶಾಂತರಾಜ ನಾಯಕ, ಹನುಮನಗೌಡ, ಶಿವಪ್ಪ ರಂಗಾಪೂರ, ಉಪೇಂದ್ರ ಆಚಾರಿ, ಕಾಶೀಪತಿ ಜವಾಳಗೇರ, ದೇವೇಂದ್ರ ಗದ್ರಟಗಿ, ಬಸವರಾಜ ಐಖಅ, ಮಂಜುನಾಥ ತಿಡಿಗೋಲ, ಹಾಗೂ ಊರಿನ ಗುರು ಹಿರಿಯರು ಯುವಕರು ಇದ್ದರು ಎಂದು ವರದಿಯಾಗಿದೆ.

## ಆಕಸ್ಮಿಕವಾಗಿ ಮನೆಗೆ ಬೆಂಕಿ ತಗುಲಿ – 45,000 ರೂ.ಗಳಷ್ಟು ಹಾನಿ

**ಕಲಕೇರಿ :** ತಾಳಿಕೋಟೆ ತಾಲೂಕಿನ ಕಲಕೇರಿ ಗ್ರಾಮದಲ್ಲಿ ಆಕಸ್ಮಿಕವಾಗಿ ಒಂದು ರೂಮಿಗೆ ಬೆಂಕಿ ಹತ್ತಿತು ಇದು ಕಲಕೇರಿ ಗ್ರಾಮದಲ್ಲಿ ಮಧ್ಯಾಹ್ನ 12:30 ಗಂಟೆಗೆ ನಡೆದ ಘಟನೆ ಮನೆಯ ಮಾಲೀಕರಾದ ಭೀಮಣ್ಣ ತಂದೆ ಸಣ್ಣ ತಿಮ್ಮಯ್ಯ ವಡ್ಡರ್ ಇವರು ಮನೆಯಲ್ಲಿ ಯಾರು ಇಲ್ಲದಾಗ ಆಕಸ್ಮಿಕವಾಗಿ ಬೆಂಕಿ ಹತ್ತಿತು ಮಧ್ಯಾಹ್ನ ಇವರ ಮಗನು ಊಟಕ್ಕೆ ಬಂದ ವೇಳೆಯಲ್ಲಿ ಆ ಒಂದು ರೂಮಿನಿಂದ ಬೆಂಕಿಯನ್ನು ನೋಡಿದ ತಕ್ಷಣ ಆ ಹುಡುಗ ನೀರನ್ನು ಹಾಕಿ ಹಾರಿಸುವ ಒಂದು ಸಾಧ್ಯತೆ ಮಾಡಿದ ಆನಂತರ ಕಲಕೇರಿಯ ಗ್ರಾಮ ಲೆಕ್ಕ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದರು. ಕಲಕೇರಿಯ ಪೊಲೀಸ್ ಠಾಣೆಯ ಪಿ.ಎಸ್.ಐ ಸುರೇಶ್ ಮಂಟೂರ್ ಪೊಲೀಸ್ ಸಿಬ್ಬಂದಿಗಳು ಬಂದು ಎಲ್ಲಾ



ರೀತಿಯ ಪರಿಶೀಲನೆ ಮಾಡಿದರು. ಮನೆಯ ಮಾಲೀಕರಾದ ಭೀಮಣ್ಣ ವಡ್ಡರ್ ಇವರು ನಾವು ಮನೆಯಲ್ಲಿ ಯಾರು ಇಲ್ಲದ ವೇಳೆಯಲ್ಲಿ ಈ ಘಟನೆ ನಡೆದಿದೆ ಎಂದು ತಿಳಿಸಿದರು. ಇವರ ಕೋಣೆಯಲ್ಲಿ ಇದ್ದಂತಹ ಟ್ರಂಕ್ ನಲ್ಲಿ ಇದ್ದ 15,000 ರೂಪಾಯಿಗಳು ಸುಟ್ಟು ನಷ್ಟ ಆಗಿದೆ. ಕೋಣೆಯಲ್ಲಿ ಇದ್ದಂತ ಒಂದು ಚೀಲ ಬ್ಯಾಳಿ ಜೋಳ ಗೋಧಿ ಮತ್ತು ಬೆಲೆ ಬಾಳುವ ಬಟ್ಟೆಗಳು ಬೆಂಕಿಯಲ್ಲಿ ಸುಟ್ಟು ಕರಕಲಾಗಿ ಹೋಗಿದೆ. ಒಟ್ಟು 45,000 ನಷ್ಟ ಬೆಂಕಿಯಲ್ಲಿ ಸುಟ್ಟು ಕರಕಲಾಗಿ ಹೋಗಿದೆ. ಎಂದು ಮನೆಯ ಮಾಲೀಕ ಭೀಮಣ್ಣ ವಡ್ಡರ್ ಇವರು ನಾವು ಮನೆಯಲ್ಲಿ ಯಾರು ಇಲ್ಲದ ವೇಳೆಯಲ್ಲಿ ಈ ಘಟನೆ ನಡೆದಿದೆ ಎಂದು ತಿಳಿಸಿದರು. ಕಲಕೇರಿ ಪೊಲೀಸ್ ಠಾಣೆ-ಯ ಸಿಬ್ಬಂದಿಯವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಮೈಬೂಬಬಾಷ ಮನಗೂಳಿ.ತಾಳಿಕೋಟೆ**

## ಪ್ರಭುದೇವರ ದೇವಸ್ಥಾನದಲ್ಲಿ ಮಂಡಲ ಪೂಜೆ, ಮಂಗಲೋತ್ಸವ

**ತೇರದಾಳ :** ವೀರಶೈವ ಲಿಂಗಾಯುತ ಧರ್ಮದಲ್ಲಿ ಗುರು ಪರಂಪರೆ ಹಾಗೂ ವಿರಕ್ತ ಪರಂಪರೆಯ ದೃಷ್ಟಿಕೋನ ಒಂದೇ ಆಗಿದೆ. ಆದರೆ ಕೆಲವರು ಎರಡನ್ನು ಒಡೆದು ಆಳುವ ನೀತಿ ಅನುಸರಿಸುತ್ತಿರುವುದು ನೋವಿನ ಸಂಗತಿಯಾಗಿದೆ ಎಂದು ಶ್ರೀಶೈಲ ಪೀಠದ ಜಗದ್ಗುರು ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯರು ಹೇಳಿದರು.





ತೇರದಾಳದ ಕ್ಷೇತ್ರಾಧಿಪತಿ ಅಲ್ಲಮ ಪ್ರಭುದೇವರ ನೂತನ ಮಂದಿರ ಲೋಕಾರ್ಪಣೆಗೊಂಡ 48 ದಿನಗಳ ನಂತರ ಶನಿವಾರ ನಡೆದ ಮಂಡಲ ಪೂಜೆ ಹಾಗೂ ಮಂಗಲೋತ್ಸವ ಕಾರ್ಯಕ್ರಮದ ಧರ್ಮ ಸಭೆಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಹನ್ನೆರಡನೇ ಶತಮಾನದಲ್ಲಿ ಎರಡು ಪರಂಪರೆಗಳ ಅನುಭಾವ ಸಂಬಂಧ ಇರುವ ಬಗ್ಗೆ ಸಾಕಷ್ಟು ದಾಖಲೆಗಳಿವೆ. ಶ್ರೀಶೈಲದ ಮಲ್ಲಿಕಾರ್ಜುನ ಪಂಡಿತಾರಾಧ್ಯರನ್ನು ಅಂದು ಬಸವಣ್ಣ ಶ್ರೀಶೈಲಕ್ಕೆ ಆಗಮಿಸಿದ ಸಂದರ್ಭದಲ್ಲಿ ಕಲ್ಯಾಣಕ್ಕೆ ಆಗಮಿಸುವಂತೆ ಆಹ್ವಾನ ನೀಡಿದ್ದನ್ನು ತಿಳಿಸಿದ ಜಗದ್ಗುರುಗಳು, ಇತಿಹಾಸ ಗೊತ್ತಿಲ್ಲದವರು ಎರಡು ಪರಂಪರೆಗಳನ್ನು ಬೇರ್ಪಡಿಸುವ ಕೆಲಸ ಮಾಡುತ್ತಿದ್ದಾರೆ. ಹೀಗಾದರೆ ರಾಜ್ಯದಲ್ಲಿ ಬಹುಸಂಖ್ಯಾತರಾಗಿರುವ ವೀರಶೈವ ಲಿಂಗಾಯುತರು ಅಲ್ಪ ಸಂಖ್ಯಾತ ರಾಗುವುದರಲ್ಲಿ ಯಾವುದೇ ಸಂದೇಹ ಇಲ್ಲ ಎಂದು ಕಳವಳ ವ್ಯಕ್ತಪಡಿಸಿದ ಜಗದ್ಗುರುಗಳು, ಹನ್ನೆರಡನೇ ಶತಮಾನದಲ್ಲಿ ಬಸವಣ್ಣ ಸಾಮಾಜಿಕ ಕ್ರಾಂತಿ ಮಾಡಿದರೆ, ಅಲ್ಲಮಪ್ರಭು ಆಧ್ಯಾತ್ಮದ ಕ್ರಾಂತಿ ಮಾಡಿದವರು. ಮನುಷ್ಯ ಅಹಂಕಾರವನ್ನು ಕಳೆದುಕೊಂಡಾಗ ಮಾತ್ರ ಅನುಭವ ಆಗುತ್ತದೆ. ಆಧ್ಯಾತ್ಮದ ತತ್ವವನ್ನು ಬೆಡಗಿನ ವಚನ ಮೂಲಕ ಅಲ್ಲಮಪ್ರಭುಗಳು ತೋರಿಸುವ ಮೂಲಕ ಆಧ್ಯಾತ್ಮದ ಶಕ್ತಿ ಹೆಚ್ಚಿಸಿದ್ದಾರೆಂದು ಹೇಳಿದರು.

ಜಮಖಂಡಿ ಮುತ್ತಿನಕಂತಿ ಮಠದ ಶಿವಲಿಂಗ ಪಂಡಿತಾರಾಧ್ಯ ಶಿವಾಚಾರ್ಯ ಮಾತನಾಡಿ ಸನಾತನ ಧರ್ಮ ಎಂದರೆ ಸತ್ಯ. ಸತ್ಯವೇ ಧರ್ಮವಾಗಿದೆ. ಆದ್ದರಿಂದ ಭಕ್ತರು ಮೊದಲು ಇದನ್ನು ಅರಿಯಬೇಕು. ದೇವಸ್ಥಾನ ಲೋಕಾರ್ಪಣೆ ಮಾಡಿದರೆ ಅದು ಪೂರ್ಣಗೊಳ್ಳುವುದಿಲ್ಲ. 48 ದಿನಗಳ ಬಳಿಕ ಮಂಡಲ ಪೂಜೆ ಮಾಡಿದಾಗ ಮಾತ್ರ ದೇವಸ್ಥಾನ ಪರಿಪೂರ್ಣಗೊಳ್ಳುತ್ತದೆ.

ಇದು ನಿಜವಾದ ಶಾಸ್ತ್ರವಾಗಿದೆ ಎಂದು ತಿಳಿಸಿದರು. ಶಾಸಕರಾದ ಸಿದ್ದು ಸವದಿ, ಜಗದೀಶ ಗುಡಗುಂಟಿ, ತೇರದಾಳ ಹಿರೇಮಠದ ಗಂಗಾಧರ ದೇವರು ಅವರಿಗೆ ಪಟ್ಟಾಭಿಷೇಕ ಮಾಡುವ ಕೆಲಸಕ್ಕೆ ಮುಂದಾಗೋಣ ಎಂದು ಹೇಳಿದರು.

ಜಮಖಂಡಿಯ ಗೌರಿಶಂಕರ ಶಿವಾಚಾರ್ಯರು, ಬನಹಟ್ಟಿಯ ಶರಣಬಸವ ಶಿವಾಚಾರ್ಯರು, ಮೈಷಾಳದ ಡಾ. ಶಿವಯೋಗಿ ಶಿವಾಚಾರ್ಯರು, ಕೊಣ್ಣೂರು ಹೊರಗಿನಮಠದ ಡಾ. ವಿಶ್ವಪ್ರಭು ಶಿವಾಚಾರ್ಯರು, ರುದ್ರಮುನಿ ಶಿವಾಚಾರ್ಯರು,

ಅಡವಿ ಸಿದ್ಧೇಶ್ವರ ಶ್ರೀ, ಸಂಗಮೇಶ್ವರ ಶಿವಾಚಾರ್ಯರು, ಅರ್ಚಕ ಸೇವಾ ಸಮಿತಿ ಅಧ್ಯಕ್ಷ ಗುಹೇಶ್ವರ ಪುರಾಣಿಕಮಠ, ಪ್ರವೀಣ ನಾಡಗೌಡ, ಬಸವರಾಜ ಬಾಳಿಕಾಯಿ, ನಾಗಪ್ಪ ಸನದಿ, ದೇವಲ ಸಕಾ9ರ ದೇಸಾಯಿ, ಅರ್ಚಕ ಪರಯ್ಯ ಮೇಲಿನಮನಿ ಮತ್ತಿತರರು ಉಪಸ್ಥಿತರಿದ್ದರು. ಎಂ. ಬಿ. ಮಾಳೇದ, ಈಶ್ವರ ಯಲ್ಲಟ್ಟಿ ಕಾರ್ಯಕ್ರಮ ನಿರ್ವಹಿಸಿದರು.

## ಸಾಹಿತ್ಯ ಕ್ಷೇತ್ರಕ್ಕೆ ರಬಕವಿ-ಬನಹಟ್ಟಿಗೆ ವಿಶಿಷ್ಠ ಸ್ಥಾನ-ಮಾನ: ಶಂಕರ ಬಿದರಿ



**ರಬಕವಿ-ಬನಹಟ್ಟಿ :** ಕನ್ನಡ ಸಾಹಿತ್ಯ ಲೋಕದಲ್ಲಿ ರಬಕವಿ-ಬನಹಟ್ಟಿ ತಾಲೂಕಿನದು ವಿಶಿಷ್ಠ ಸ್ಥಾನವಿದೆ. ಮಾನವನ ಬದುಕಿನಲ್ಲಿ ಬಲವಾದ ಆತ್ಮಬಲವನ್ನು ಹೆಚ್ಚಿಸುವ ಕಾರ್ಯದಲ್ಲಿ ವಿಭಿನ್ನ ಸಾಹಿತ್ಯಗಳು ಅರ್ಥಪೂರ್ಣವಾದ ಕೊಡುಗೆಗಳನ್ನು ನೀಡಿವೆ. ಅದರಲ್ಲಿ ರಬಕವಿ-ಬನಹಟ್ಟಿ ತಾಲೂಕಿನ ಸಾಹಿತಿಗಳದ್ದೂ ಸಿಂಹಪಾಲುವಿದೆ ಎಂದು ನಿವೃತ್ತ ಹಿರಿಯ ಪೊಲೀಸ್ ಅಧಿಕಾರಿ, ವೀರಶೈವ ಮಹಾಸಭಾ ರಾಜ್ಯಾಧ್ಯಕ್ಷ ಡಾ. ಶಂಕರ ಮಹಾದೇವ ಬಿದರಿ ಹೇಳಿದರು.

ಬನಹಟ್ಟಿಯಲ್ಲಿ ಬಸವ ಸಂಪದ ಬಳಗದಿಂದ ಜರುಗಿದ ಸಾಹಿತ್ಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ವ್ಯಕ್ತಿತ್ವವು ಆದರ್ಶ, ಸದಾಚಾರ, ನಿಷ್ಠೆ, ದಕ್ಷತೆ, ಪ್ರಾಮಾಣಿಕತೆ, ಆತ್ಮಬಲಗಳ ಸಂಗಮವಾಗಿದೆ. ಸಾಹಿತ್ಯಿಕ ಅಧ್ಯಯನ ಹಾಗು ಅನುಕರಣೆಯಿಂದ ಜೀವನ ಮೌಲ್ಯ ಹೆಚ್ಚಿಸಿ ಕೊಳ್ಳಬಹುದಾಗಿದೆ. ಅವು ಆದರ್ಶ ವ್ಯಕ್ತಿತ್ವ ರೂಪಿಸಿಕೊಳ್ಳಲು ಪ್ರೇರಣೆಯೆಂದರು.

ಹಿರಿಯ ಸಾಹಿತಿ ಮಲ್ಲಿಕಾರ್ಜುನ ಹುಲಗಬಾಳಿ ಮಾತನಾಡಿ, ಸಾಹಿತ್ಯವು ಸಾಮಾಜಿಕ ಪ್ರಾಣಿಗಳಿಗೆ ಸಂಸ್ಕಾರ ನೀಡಿ ಮಾನವರಾಗಿ ಮಾಡಿದೆ. ಇಂತಹ ಅಮೂಲ್ಯವಾದ ಸಾಹಿತ್ಯವನ್ನು ಜನರಿಗೆ ತಲುಪಿಸುವ ಕಾರ್ಯ ನಡೆಯಬೇಕೆಂದರು.

ಇದೇ ಸಂದರ್ಭದಲ್ಲಿ ಹಿರಿಯ ಸಾಹಿತಿ ಸಿದ್ಧರಾಜ ಪೂಜಾರಿ, ಜಯವಂತ ಕಾಡದೇವರ, ಶಂಕರ ಜುಂಜಪ್ಪನವರ, ಸಿದ್ರಾಮಪ್ಪ ಸವದತ್ತಿ, ಸೋಮಶೇಖರ ಕೊಟ್ರಶೆಟ್ಟಿ, ಕಿರಣ ಆಳಗಿ, ಮಲ್ಲಣ್ಣ ಕಕಮರಿ, ಯಶವಂತ ವಾಜಂತ್ರಿ, ಸಿದ್ಧರಾಮ ಹಾವಿನಾಳ, ಚಿದಾನಂದ ಸೊಲ್ಲಾಪೂರ, ಆನಂದ ಕುಲಗೋಡ, ಮಹಾಶಾಂತ ಶೆಟ್ಟಿ, ಮಧುಕೇಶ್ವರ ಬೆಳಗಲಿ, ಆನಂದ ಕಾಡದೇವರ, ಆನಂದ ಕುಳ್ಳಿ, ಬಸಯ್ಯ ವಸ್ತ್ರದ, ಜಿ. ಎಸ್. ವಡಗಾಂವಿ, ನೀಲಕಂಠ ದಾತಾರ, ಶರತ್ಚಂದ್ರ ಜಂಬಗಿ ಸೇರಿದಂತೆ ಇನ್ನೂ ಅನೇಕರು ಭಾಗವಹಿಸಿದ್ದರು.

## ವಡ್ಡಿನ ಮಹಾಲಕ್ಷ್ಮೀ ಜಾತ್ರಾ ಮಹೋತ್ಸವ



**ಮಹಾಲಿಂಗಪುರ :** ಪಟ್ಟಣದ ಖೋತ ತೋಟದ ವಡ್ಡಿನ ಮಹಾಲಕ್ಷ್ಮಿ ದೇವರ ಜಾತ್ರಾ ಮಹೋತ್ಸವ ಶುಕ್ರವಾರ ಸಂಭ್ರಮದಿಂದ ಜರುಗಿತು.

ಜಾತ್ರೆಯ ನಿಮಿತ್ಯ ಲಕ್ಷ್ಮೀ ದೇವಿಯ ಮೂರ್ತಿಗೆ ಅಭಿಷೇಕ, ವಿಶೇಷ ಹೂವಿನ ಅಲಂಕಾರ ಮಾಡಿ ಪೂಜಿಸಲಾಗಿತ್ತು. ಜಾತ್ರೆಗೆ ಆಗಮಿಸಿದ ಸಾವಿರಾರು ಮಹಿಳೆಯರಿಗೆ ಉಡಿ ತುಂಬಲಾಯಿತು. ಜಾತ್ರೆಯ ನಿಮಿತ್ಯ ಲಕ್ಷ್ಮಿ ದೇವಿಯ ಪಲ್ಲಕ್ಕಿ ಉತ್ಸವ ನಡೆಸಲಾಯಿತು. ಜಾತ್ರೆಯ ನಿಮಿತ್ಯ ಶುಕ್ರವಾರ ನಸುಕಿನ ಜಾವ ನೂರಾರು ಭಕ್ತರು ದೀಡ ನಮಸ್ಕಾರ ಹಾಕಿದರು.

ಮಧ್ಯಾಹ್ನ 12-30 ಕ್ಕೆ ಲಕ್ಷ್ಮೀ ದೇವಿಯ ಭಕ್ತ ಅರ್ಜುನ ಸಣಕಲ್ ಅವರು ಅಗ್ನಿಕುಂಡ ಹಾಯ್ದರು. ಮಧ್ಯಾಹ್ನ 12 ರಿಂದ ಸಂಜೆ 5 ಗಂಟೆವರೆಗೆ ಸಾವಿರಾರು ಜನರು ದೇವಿಯ ದರ್ಶನ ಪಡೆದುಕೊಂಡು ಮಹಾಪ್ರಸಾದ ಸವಿದರು.

ಮಹಾಲಕ್ಷ್ಮಿ ದೇವಸ್ಥಾನದ ಟ್ರಸ್ಟ್ ಕಮಿಟಿ ಹಿರಿಯರಾದ ಲಕ್ಷ್ಮಣ ಪಾಟೀಲ, ಅರ್ಜುನ ಖೋತ, ಬಸವರಾಜ ಹಿಪ್ಪರಗಿ, ಬಸವರಾಜ ಬುಡೆಜಾಡರ, ಸಂಗಪ್ಪ ಖೋತ, ಉಮೇಶ ಜಾಧವ, ಬಸವರಾಜ ಬಂಡಿ, ಆನಂದ ಸನದಿ, ಪಂಚಯ್ಯಾ ಮಠಪತಿ, ಚಂದ್ರವ್ವ ಮೇರಾಪಟ್ಟಿ, ಈರಪ್ಪ ದಿನ್ನಿಮನಿ, ಶ್ರೀಶೈಲ ಬಿಲಕುಂದಿ, ಡಾ. ಅಶೋಕ ದಿನ್ನಿಮನಿ, ಗುರಲಿಂಗಪ್ಪ ಖೋತ, ಪ್ರಭು ಡಂಬಳ, ಸ್ವರೂಪ ಖೋತ , ಕುಮಾರ ಮಠಪತಿ, ಮಲ್ಲು ದಿನ್ನಿಮನಿ, ಪರಶು ಶಿವಣಗಿ, ಸಿದ್ದು ಖೋತ, ರಮೇಶ ಮೂಲಿಮನಿ, ಅರ್ಚಕಿ ಮಹಾದೇವಿ ಮಠಪತಿ ಸೇರಿದಂತೆ ಹಲವರು ಜಾತ್ರಾ ಮಹೋತ್ಸವದ ನೇತೃತ್ವ ವಹಿಸಿದ್ದರು.

## ತಂತ್ರಜ್ಞಾನವನ್ನು ಸಾಹಿತ್ಯದ ಬೆಳವಣಿಗೆಗಾಗಿ ಸಕಾರಾತ್ಮಕ ಬಳಕೆಯ ಅಗತ್ಯ

**ರಬಕವಿ-ಬನಹಟ್ಟಿ :** ಇತ್ತೀಚಿನ ದಿನಗಳಲ್ಲಿ ಸಾಹಿತ್ಯದ ಗತಿ ಹಲವು ಆಯಾಮಗಳನ್ನು ಪಡೆದುಕೊಂಡಿದೆ. ಸಾಮಾಜಿಕ ಜಾಲತಾಣದ ಮೂಲಕ ಮಿಂಚಿನಂತೆ ಸಂಚರಿಸುತ್ತಿವೆ. ತಂತ್ರಜ್ಞಾನವನ್ನು ಸಾಹಿತ್ಯದ ಬೆಳವಣಿಗೆಗೆ ಸಕಾರಾತ್ಮವಾಗಿ ಬಳಕೆ ಮಾಡಿಕೊಳ್ಳುವುದು ಅಗತ್ಯವಾಗಿದೆ ಎಂದು ಬೆಂಗಳೂರಿನ ಹಿರಿಯ ಸಾಹಿತಿ ಎಂ. ಎಸ್. ರಾಮನಾಥ ಅಭಿಪ್ರಾಯ ಪಟ್ಟರು.



ಅವರು ಶನಿವಾರ ಬನಹಟ್ಟಿಯ ಬಿದರಿಯವರ ಬಸವೇಶ್ವರ ಸಮುದಾಯ ಭವನದಲ್ಲಿ ಹಿರಿಯ ಸಾಹಿತಿ ಮಲ್ಲಿಕಾರ್ಜುನ ಹುಲಬಗಾಳಿಯವರು ರಚಿಸಿದ 'ಚಿಗಳಿ' ಮತ್ತು 'ತಿರುಗಾಟ' ಕೃತಿಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ವರ್ತಮಾನದ ಅನುಭವಗಳನ್ನು ಸೃಷ್ಟಿಸುವ ಸಾಹಿತ್ಯ ಎಷ್ಟೇ ಪ್ರಾಚೀನವಾದರೂ ಅದು ಸಮಕಾಲೀನವಾಗುತ್ತದೆ. ಹುಲಗಬಾಳಿಯವರು ತಮ್ಮ ಜ್ಞಾನ ಬಂಢಾರ ಹಾಗೂ ಆರೋಗ್ಯಕರ ಬರಹಗಳೊಂದಿಗೆ ಸಾಹಿತ್ಯದ ಕೃಷಿ ಮಾಡುತ್ತ, ಬರಹವನ್ನು ತಮ್ಮ ಬದುಕನ್ನಾಗಿಸಿ ಕೊಂಡವರು ಎಂದು ರಾಮನಾಥ ತಿಳಿಸಿದರು.

ನಿವೃತ್ತ ಪೊಲೀಸ್ ಅಧಿಕಾರಿ ಶಂಕರ ಬಿದರಿ ಮಾತನಾಡಿ, ಆಯಾ ಕಾಲಕ್ಕೆ ತಕ್ಕಂತೆ ಸಾಹಿತ್ಯದಪ್ರಕಾರಗಳುಬದಲಾಗಿರಬಹುದು. ಆಯಾ ಕಾಲದ ಸಂವೇದನೆಗಳನ್ನು ಸೃಜನಶೀಲಗೊಳಿಸುವುದು ಸಾಹಿತಿಗಳ ಜವಾಬ್ದಾರಿಯಾಗಿದೆಹುಲಗಬಾಳಿಯವರು ತಮ್ಮ ಇಳಿ ವಯಸ್ಸಿನಲ್ಲಿಯೂ ಸಾಹಿತ್ಯದೊಂದಿಗೆ ಬದುಕುತ್ತಿರುವುದು ಯುವಕರಿಗೆ ಸ್ಫೂರ್ತಿಯಾಗಿದೆ ಎಂದು ಬಿದರಿ ತಿಳಿಸಿದರು. ಕೃತಿಕಾರ ಮಲ್ಲಿಕಾರ್ಜುನ ಹುಲಗಬಾಳಿ ಮಾತನಾಡಿದರು.

ಸಾಹಿತಿಗಳಾದ ಲಲಿತಾ ಹೊಸಪ್ಯಾಟಿ ಮತ್ತು ಶೀಲಾ ಅರಕಲಗೂಡು ಗ್ರಂಥಗಳನ್ನು ಲೋಕಾರ್ಪಣೆ ಮಾಡಿದರು.

ಹಾರೂಗೇರಿಯ ಶರಣ ಐ. ಆರ್. ಮಠಪತಿ, ಗದಗದ ನ್ಯಾಯಧೀಶ ಜಿ. ಆರ್. ಶೆಟ್ಟರ, ಸಿದ್ಧರಾಜ ಪೂಜಾರಿ, ಡಾ. ಉಮಾಶೇಖರ ಸ್ವಾಮಿ, ಡಾ. ಅಪ್ಪಾಸಾಹೇಬ ಬಿ. ನಾಡಗೌಡಪಾಟೀಲ ವೇದಿಕೆ ಮೇಲೆ ಆಸೀನರಾಗಿದ್ದರು.

# ಸಂಭ್ರಮದ ಕೆಂಗೇರಿಮಡ್ಡಿ ಮಹಾಲಕ್ಷ್ಮೀ ದೇವರ ಜಾತ್ರೆ

**ಮಹಾಲಿಂಗಪುರ :** ಪಟ್ಟಣದ ಕೆಂಗೇರಿಮಡ್ಡಿಯ ಮಹಾಲಕ್ಷ್ಮೀ ದೇವಿ ಜಾತ್ರಾ ಮಹೋತ್ಸವವು ಶುಕ್ರವಾರ ಅಪಾರ ಭಕ್ತರ ಮಧ್ಯೆ ಸಂಭ್ರಮ ಸಡಗರದಿಂದ ನಡೆಯಿತು.

ಜಾತ್ರೆಯ ನಿಮಿತ್ಯ ಲಕ್ಷ್ಮೀ ದೇವಿಯ ಮೂರ್ತಿಗೆ ಅಭಿಷೇಕ, ವಿಶೇಷ ಅಲಂಕಾರ ಮಾಡಿ ಪೂಜಿಸಲಾಗಿತ್ತು. ಜಾತ್ರೆಗೆ ಆಗಮಿಸಿದ ಸಾವಿರಾರು ಮಹಿಳೆಯರಿಗೆ ಉಡಿ ತುಂಬಲಾಯಿತು. ಜಾತ್ರೆಯ ನಿಮಿತ್ಯ ಕೆಂಗೇರಿಮಡ್ಡಿಯ ಬಡಾವಣೆಯಲ್ಲಿ ಲಕ್ಷ್ಮೀ ದೇವಿಯ ಪಲ್ಲಕ್ಕಿ ಉತ್ಸವ ನಡೆಸಲಾಯಿತು. ಜಾತ್ರೆಯ ನಿಮಿತ್ಯ ನಸುಕಿನ ಜಾವ ನೂರಾರು ಭಕ್ತರು ದೀಡ ನಮಸ್ಕಾರ ಹಾಕಿದರು.

ಮಧ್ಯಾಹ್ನ ಒಂದಕ್ಕೆ ಲಕ್ಷ್ಮೀ ದೇವಿಯ ಅರ್ಚಕಿ ಕಸ್ತೂರಿ ವಿಠ್ಠಲ ಪೂಜೇರಿ ಅವರು ಅಗ್ನಿಕುಂಡ ಹಾಯ್ದು ಭಕ್ತಿಯ ಪರಕಾಷ್ಠೆ ಮೆರೆದರು. ಜಾತ್ರೆಗೆ ಆಗಮಿಸಿದ ಸಾವಿರಾರು ಜನರು ದೇವಿಯ ದರ್ಶನ ಪಡೆದುಕೊಂಡು ಮಹಾಪ್ರಸಾದ ಸವಿದರು.




ದೇವಸ್ಥಾನ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಸಿದ್ದಣ್ಣ ರಾಮೋಜಿ, ಉಪಾಧ್ಯಕ್ಷ ಭೀಮಶಿ ಗೌಂಡಿ, ಕಾರ್ಯದರ್ಶಿ ಬಸವರಾಜ ಬಂಡಿವಡ್ಡರ, ಖಜಾಂಚಿ ಪ್ರಕಾಶ ರಾಮೋಜಿ, ಸದಸ್ಯರಾದ ಪರಸಪ್ಪ ಬಂಡಿ, ಬಸವರಾಜ ದಿನ್ನಿಮನಿ, ಮುತ್ತಪ್ಪ ಕುಂದ್ರಾಳ, ಬಸವರಾಜ ಓಲೇಕಾರ, ಗಂಗಪ್ಪ ದಿನ್ನಿಮನಿ, ಸುಭಾಸ ಶಿರೋಳ, ಸಂತೋಷ ಮೇದಾರ, ಪುರಸಭೆ ಸದಸ್ಯರಾದ ಸರಸ್ವತಿ ರಾಮೋಜಿ, ಶೇಖರ ಅಂಗಡಿ, ಅಬ್ದುಲ್ ರಜಾಕ್ ಬಾಗವಾನ ಹಾಗೂ ಲಕ್ಷ್ಮೀ ದೇವಿ ಸೇವಕ ಸದ್ಭಕ್ತರಾದ ವಿಠ್ಠಲ ಪೂಜೇರಿ, ಸುರೇಶ ಹೂಗಾರ, ಮಹಾಲಿಂಗ ಶಿರೋಳ, ಪರಸಪ್ಪ ಬಂಡಿ, ಚನ್ನಪ್ಪ ರಾಮೋಜಿ, ಸಿದ್ದು ತಿಪ್ಪಾ, ತಿಪ್ಪಣ್ಣ ಪಾತ್ರೋಟ, ಗಂಗಪ್ಪ ದಿನ್ನಿಮನಿ, ರಾಜು ಜಮಾದಾರ, ರಾಘು ದಿನ್ನಿಮನಿ, ಪ್ರಕಾಶ ಕಂಠಿ, ಮಹಾಲಿಂಗ ಮೇದಾರ, ರಮೇಶ ಮೆಣಸಿನಕಾಯಿ, ಬಸವರಾಜ ಪೂಜೇರಿ ಸೇರಿದಂತೆ ಹಲವರು ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿದ್ದರು.

# ಕೊಲ್ಹಾರ: ವಿವಿಧ ಕಾಮಗಾರಿಗೆ ಭೂಮಿಪೂಜೆ

**ಕೊಲ್ಹಾರ :** ಪಟ್ಟಣದ ವಾರ್ಡ್ ಸಂಖ್ಯೆ 1.2 ಮತ್ತು 3ರಲ್ಲಿ ಕೃಷ್ಣ ಮೇಲ್ದಂಡೆ ಯೋಜನೆ, ಪುನರ್ ವಸತಿ ಪುನರ್ ನಿರ್ಮಾಣ ಇಲಾಖೆ ಅಡಿಯ ರಸ್ತೆಗಳ ಡಾಂಬರೀಕರಣ,ಹಾಗೂ ಸಿ.ಸಿ ಚರಂಡಿ ಕಾಮಗಾರಿಗೆ ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ.ಎಸ್ ಪಾಟೀಲ್ ಬುಧವಾರ ಭೂಮಿಪೂಜೆ ನೆರವೇರಿಸಿದರು.



ಈ ಸಂದರ್ಭದಲ್ಲಿ , ಹಿರೇಮಠ ಪಡದಯ್ಯ ಮಹಾಸ್ವಾಮಿಗಳು ದಿಗಂಬರೇಶ್ವರ ಮಠದ ಕಲ್ಲಿನಾಥ ದೇವರು. ಎಸ್. ಬಿ ಪತಂಗಿ, ಆರ್ ಬಿ ಪಕಾಲಿ, ಪ ಪಂ ಸದಸ್ಯರಾದ ಸಿ.ಎಸ್ ಗಿಡ್ಡಪ್ಪಗೋಳ, ಬನಪ್ಪ ಬಾಲಗೊಂಡ ಅಶೋಕ್ ಜಿಡ್ಡಿಬಾಗಿಲ, ಶ್ರೀಶೈಲ ಅಥಣಿ, ತೌಸೀಫ್ ಗಿರಗಾಂವಿ, ಎಂ.ಆರ್ ಕಲಾದಗಿ, ದಶರಥ ಈಟಿ,ಇಕ್ಬಾಲ್ ನದಾಫ, ಯಮನೂರಿ ಮಾಕಾಳಿ, ಶರಣು ಬಾಲಗೊಂಡ, ಕೃ.ಮೇ.ಯೋ ಪು.ಪು ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಎಸ್. ಆಯ್ ಶೀಲವಂತ, ಪ.ಪಂ ಮುಖ್ಯಾಧಿಕಾರಿ ಉಮೇಶ್ ಚಲವಾದಿ ಸಹಿತ ಅನೇಕರು ಇದ್ದರು.

# ಡಾ. ಮನಮೋಹನ ಸಿಂಗರಿಗೆ ಶ್ರದ್ಧಾಂಜಲಿ




**ಕೊಲ್ಹಾರ :** ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ನಿಧನದ ಪ್ರಯುಕ್ತ ಪಟ್ಟಣದ ಬ್ಲಾಕ್ ಕಾಂಗ್ರೆಸ್ ಕಚೇರಿಯಲ್ಲಿ ಮನಮೋಹನ್ ಸಿಂಗ್ ಅವರ ಭಾವಚಿತ್ರವನ್ನಿಟ್ಟು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು, ಎರಡು ನಿಮಿಷ ಮೌನಾಚರಣೆ ಮಾಡುವ ಮೂಲಕ ಶ್ರದ್ಧಾಂಜಲಿ ಅರ್ಪಿಸಿದರು.

ದೇಶದ ಮಾಜಿ ಪ್ರಧಾನಿಗಳಾದ ಡಾ:ಮನಮೋಹನ್ ಸಿಂಗ್ ರವರ ನಿಧನದ ಬಗ್ಗೆ ಸಂತಾಪ ವ್ಯಕ್ತಪಡಿಸಿ ಬ್ಲಾಕ್ ಕಾಂಗ್ರೆಸ ಅಧ್ಯಕ್ಷ ಆರ್.ಬಿ ಪಕಾಲಿ, ಮಾತನಾಡಿದ ಅವರು ಡಾ: ಮನಮೋಹನ್ ಸಿಂಗ್ ರವರು ದೇಶವನ್ನು 10 ವರ್ಷಗಳ ಕಾಲ ಪ್ರಧಾನ ಮಂತ್ರಿಗಳಾಗಿ ಅಧಿಕಾರ ನಿರ್ವಹಿಸಿ ಮುನ್ನಡೆಸಿದ್ದು,

ಈ ಅವಧಿಯಲ್ಲಿ ದೇಶ ಆರ್ಥಿಕ ಹಾಗೂ ವೈಜ್ಞಾನಿಕ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿದೆ.ದೇಶ ಕಟ್ಟುವಲ್ಲಿ ಅವರ ಪಾತ್ರ ಮಹತ್ವವಿದ್ದು,ದೇಶದ ಅರ್ಥ ವ್ಯವಸ್ಥೆಗೆ ಹೊಸ ದಿಕ್ಕು ತೋರಿಸಿದ್ದ ಮಾಜಿ ಪ್ರಧಾನಿಗಳಾದ ಮನಮೋಹನ್ ಸಿಂಗ್ ಅವರ ಆತ್ಮಕ್ಕೆ ಚಿರಶಾಂತಿ ಸಿಗಲೆಂದು ಹೇಳಿದರು

ಈ ಸಂದರ್ಭದಲ್ಲಿ ಸಲೀಮ್ ಅತ್ತಾರ ಅವರು, ಡಾ.ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಅವರು ದೇಶಕ್ಕೆ ನೀಡಿರುವ ಕೊಡುಗೆ ಮತ್ತು ಅವರ ಆರ್ಥಿಕ ಸುಧಾರಣೆಗಳ ಬಗ್ಗೆ ಹೇಳಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಅಸಂಘಟಿತ ಕಾರ್ಮಿಕರ ಘಟಕದ ಅಧ್ಯಕ್ಷ ಮೊಹಮ್ಮದ್ ಹನೀಫ್ ಮಕಾನದಾರ ಗೈಬುಸಾಬ ಕಂಕರಪೀರ ಬನಪ್ಪ ಬಾಲಗೊಂಡ, ಇಕ್ಬಾಲ್ ನದಾಫ,ಸಿಂಧೂರ ಬ್ಯಾಲ್ಯಾಳ ಸಿಡ್ಲಪ್ಪ ತಳಗೇರಿ ಸಹಿತ ಅನೇಕರು ಉಪಸ್ಥಿತರಿದ್ದರು.

# ಜಿಲ್ಲೆಯಲ್ಲಿ ಕಸಾಪದಿಂದ ನಿರಂತರ ಸಾಹಿತ್ಯಿಕ ಕಾರ್ಯಕ್ರಮ

**ರಬಕವಿ-ಬನಹಟ್ಟಿ :** ಮೂರು ವರ್ಷಗಳ ಅವಧಿಯಲ್ಲಿ ಬಾಗಲಕೋಟೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಒಂಭತ್ತು ತಾಲ್ಲೂಕುಗಳಲ್ಲಿ ಸಾಹಿತ್ಯಿಕ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸುತ್ತ ಬರಲಾಗಿದ್ದು, ಇದಕ್ಕೆ ಜಿಲ್ಲೆಯ ಸ್ವಾಮೀಜಿಯವರ, ಹಿರಿಯ ಸಾಹಿತಿಗಳ, ಸಾಹಿತ್ಯಾಸಕ್ತರ ಪ್ರೋತ್ಸಾಹ ಮತ್ತು ಬೆಂಬಲ ಸ್ಮರಣೀಯವಾದುದು ಎಂದು ಬಾಗಲಕೋಟೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ತಿಳಿಸಿದರು.

ಅವರು ಭಾನುವಾರ ಸಮೀಪದ ಹೊಸೂರಿನ ಪದ್ಮಾವತಿ ಅಂತರರಾಷ್ಟ್ರೀಯ ಶಾಲೆಯಲ್ಲಿ ಸಾಹಿತ್ಯ ಪರಿಷತ್ತಿನ ಮೂರು ವರ್ಷಗಳ ಅಭಿನಂದನಾ ಸಮಾರಂಭ ಮತ್ತು ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ದತ್ತಿ ನಿಧಿ ಉಪನ್ಯಾಸ, ಜಿಲ್ಲಾ ಸಮ್ಮೇಳನ, ತಾಲ್ಲೂಕು ಸಮ್ಮೇಳನ, ಕವಿಗೋಷ್ಠಿ, ತಿಂಗಳ ಪುಸ್ತಕಾವಲೋಕನ, ಪರಿಷತ್ತಿನ ನಡಿಗೆ ಶಾಲೆಯ ಕಡೆಗೆ ಸೇರಿದಂತೆ ಅನೇಕ ಮಹತ್ವದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಕ್ರಿಯಾಶೀಲ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಶೆಲ್ಲಿಕೇರಿ ತಿಳಿಸಿದರು.

ವಿಜಯಪುರದ ಹಿರಿಯ ಸಾಹಿತಿ ಶಂಕರ ಬೈಚಬಾಳ ಮಾತನಾಡಿ, ಒಳ್ಳೆಯ ಅಭಿರುಚಿ ನಾಗರಿಕತೆಯ ಹೆಗ್ಗುರುತು. ಉತ್ತಮ ಪುಸ್ತಕಗಳು ಹುಟ್ಟಲಿರುವ ಜನಾಂಗದ ಆಸ್ತಿಗಳು. ಪುಸ್ತಕಗಳು ನಾಡಿನ ಸಂಸ್ಕೃತಿ




ಮತ್ತು ವ್ಯವಸ್ಥೆಯನ್ನು ಕಟ್ಟಿಕೊಡುತ್ತವೆ. ವಚನಗಳನ್ನು ಪ್ರಚಾರ ಮಾಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ವಚನಗಳು ಸಂವಿಧಾನಕ್ಕೆ ಸಮಾನವಾದವುಗಳಾಗಿವೆ. ಬಾಗಲಕೋಟೆ ಜಿಲ್ಲಾ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಮತ್ತು ತಾಲ್ಲೂಕು ಮಟ್ಟದ ಪದಾಧಿಕಾರಿಗಳು ಉತ್ತಮವಾಗಿ ಕಾರ್ಯ ಮಾಡುತ್ತಿದ್ದಾರೆ. ಒಂಭತ್ತು ತಾಲ್ಲೂಕುಗಳಲ್ಲಿ ಎಂಟು ನೂರಕ್ಕೂ ಹೆಚ್ಚು ಪದಾಧಿಕಾರಿಗಳು ಜಿಲ್ಲೆಯಲ್ಲಿ ಕನ್ನಡವನ್ನು ಕಟ್ಟುವ ಕಾರ್ಯ ಮಾಡುತ್ತಿರುವುದು ಅಭಿನಂದನಕ್ಕೆ ಅರ್ಹ ಎಂದು ಬೈಚಬಾಳ ತಿಳಿಸಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಕಸಾಪ ಅಧ್ಯಕ್ಷ ಮ. ಕೃ. ಮೇಗಾಡಿ, ಪ್ರೊ. ಎಂ. ಎಸ್. ಬದಾಮಿ, ಡಾ. ಸಿ. ಎಂ. ಜೋಶಿ, ಗಂಗಾಧರ ಅವಟೇರ, ಗುರುರಾಜ ಲೂತಿ, ಡಾ. ಚಂದ್ರಶೇಖರ ಕಾಳನ್ನವರ ಸಾಹಿತ್ಯ ಪರಿಷತ್ತಿನ ವಿವಿಧ ಚಟುವಟಿಕೆಗಳ ಸಾಧನೆಯ ಕುರಿತು ಮಾತನಾಡಿದರು.

ಮುಧೋಳದ ಇತಿಹಾಸ ಲೇಖಕ ಅರ್ಜನಸಿಂಗ್ ಝುಡೇಜ್ ಉದ್ಘಾಟಿಸಿದರು. ಹಜಾರೆ ಫೌಂಡೇಶನ್ನಿನ ಕಾರ್ಯಾಧ್ಯಕ್ಷ ಸತೀಶ ಹಜಾರೆ, ನಿವೃತ್ತ ತಹಶೀಲ್ದಾರ್ ಡಿ. ಜೆ. ಸಮಾಜ, ಪತ್ರಕರ್ತರ ಸಂಘದ ಅಧ್ಯಕ್ಷ ವಿಶ್ವಜ ಕಾಡದೇವರ, ಶ್ರೀಶೈಲ ಕುಂಬಾರ ಹಾಜರಿದ್ದರು. ಎಂ. ಬಿ. ಇಂಡಿ, ಗುರುನಾಥ ಸುತಾರ, ಜಿ. ಎಸ್. ವಡಗಾಂವಿ, ಮಲ್ಲಪ್ಪ ಗಣಿ, ಶ್ರೀಶೈಲ ಬುರ್ಲಿ, ಗೌರಿ ಮಿಳ್ಳಿ, ದಾಕ್ಷಾಯಣಿ ಮಂಡಿ, ದಾನಪ್ಪ ಆಸಂಗಿ, ಗಂಗಾಧರ ಮೋಪಗಾರ, ಸಿದ್ದಣ್ಣ ಉತ್ನಾಳ, ಮಲ್ಲೇಶಪ್ಪ ಕುಚನೂರ, ಮಲ್ಲಿಕಾರ್ಜುನ ತುಂಗಳ, ಮಹಾದೇವ ಕವಿಶೆಟ್ಟಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ವಿಜೃಂಭಣೆಯ ಶ್ರೀ ವೀರಭದ್ರೇಶ್ವರ ರಥೋತ್ಸವ



**ನವಲಗುಂದ :** ಸಮೀಪದ ಶಲವಡಿ ಗ್ರಾಮದ ವೀರಭದ್ರೇಶ್ವರ ರಥೋತ್ಸವವು ಸಕಲ ಸದ್ಭಕ್ತರ ಹರ್ಷೋದ್ಗಾರ ಮಧ್ಯೆ ವಿಜೃಂಭಣೆಯಿಂದ ಜರುಗಿ-ತು.

ಶಾಸಕಎನ್‌ಎಚ್‌ಕೋನರಡ್ಡಿಜಾತ್ರಾಮಹೋತ್ಸವದಲ್ಲಿ ಪಾಲ್ಗೊಂಡು ಭಕ್ತಸಮೂಹದೊಂದಿಗೆ ಹರಹರ ಮಹಾದೇವ ಎಂದು ಜಯಘೋಷ ಹಾಕುತ್ತಾ ಭಜನೆ, ಝಾಂಜಮೇಳ, ಡೊಳ್ಳು, ಸಂಗೀತ ವಾದ್ಯ ವೈಭವದಿಂದನಂದಿಕೊಲು,ಛತ್ರಚಾಮರಗಳೊಂದಿಗೆ ಭಕ್ತಿ ಭಾವದಿಂದ ಭಕ್ತರು ಉತ್ತತ್ತಿ, ಬಾಳೆಹಣ್ಣುಗಳನ್ನು ಎಸೆದು ನಮನ ಸಲ್ಲಿಸಿದರು.

ರಥವು ಮರಳಿ ಸ್ಥಳಕ್ಕೆ ಬಂದು ನಿಂತಾಗ ಭಕ್ತಾದಿಗಳು ಚಪ್ಪಾಳೆ ತಟ್ಟಿ ಭಕ್ತಿಭಾವ ಮೆರೆದರು. ಬಳಿಕ ದೇವಸ್ಥಾನದಲ್ಲಿ ದೇವರ ದರ್ಶನ ಪಡೆದರು.

ಬೆಳಗ್ಗೆ ವೀರಭದ್ರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ, ಅಭಿಷೇಕ ನಡೆಯಿತು. ರಥೋತ್ಸವದ ನಂತರ ಭಕ್ತರಿಗೆ ಸಮಿತಿ ವತಿಯಿಂದ ಪ್ರಸಾದ ವ್ಯವಸ್ಥೆ ಏರ್ಪಡಿಸಲಾಗಿತ್ತು.

# 'ಜೀವನ ಉಜ್ಜೀವನ' ರಸದೌತಣ ಕಾರ್ಯಕ್ರಮ

**ಕುಂದಗೋಳ :** ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ವ್ಯಕ್ತಿತ್ವ, ಅವರ ಪ್ರಸ್ತುತ ಸ್ವ ಪಕ್ಷದವರಿಗೆ ಕಿಂಚಿತ್ತೂ ಇಲ್ಲ ಎಂದು ಮಾಜಿ ಸಂಸದ ವಿ. ಎಸ್. ಉಗ್ರಪ್ಪ ಹೇಳಿದರು. ಕಲ್ಯಾಣಪುರಮಠ ಬಸವಣ್ಣಜ್ಜನವರ ಸಭಾಭವನದಲ್ಲಿ ರಜತ ಸಂಭ್ರಮದಲ್ಲಿರುವ ಗುರು ಕಾರುಣ್ಯ ಸಂಸ್ಥೆ ಹಾಗೂ ಅಟಲ್ ಸಾಹಿತ್ಯ ವೇದಿಕೆ ಆಯೋಜಿಸಿದ್ದ ಅನುಭವ, ಅನುಭಾವ, ಗುಂಗಾನ ಮತ್ತು ಸತ್ಸಂಗಗಳನ್ನೊಳಗೊಂಡ "ಜೀವನ-ಉಜ್ಜೀವನ" ರಸದೌತಣ ಕಾರ್ಯಕ್ರಮ




ಉದ್ಘಾಟಿಸಿ ಅವರು ಮಾತನಾಡಿದರು. ಅನುಭವ-ಅನುಭಾವವನ್ನು ಡಾ: ಎ.ಸಿ.ವಾಲಿಯವರು, ಗುಂಗಾನವನ್ನು ಗಾಯಕ ಶಿರಸಿ ವಿಶ್ವೇಶ್ವರ ಭಟ್, ಜೀವನ-ಉಜ್ಜೀವನ ವನ್ನು ಶಿವಮೊಗ್ಗ ಕಗ್ಗ ನಟೇಶ ಹಾಗೂ ಸಾಕ್ಷ್ಯಚಿತ್ರವನ್ನು ಬೆಂಗಳೂರಿನ ರಾಜಾಚಾರ್ಯ ಅವರು ಪ್ರಸ್ತುತಗೊಳಿಸಿದರು. ಜತೆಗೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಗೈದ ಇಂಗಳಗಿ ಮಲ್ಲೇಶಪ್ಪ ಮಾಳವಾಡ (ರಂಗಭೂಮಿ) ಮತ್ತು ಹರ್ಲಾಪುರ ಶಂಭಯ್ಯ ಹಿರೇಮಠ (ಜಾನಪದ) ಅವರನ್ನು ಸನ್ಮಾನಿಸಿ-ಗೌರವಿಸಲಾಯಿತು. ಶ್ರೀಮಂತ ಅರ್ಜುನ ನಾಡಗೀರ ಮತ್ತು ಡಾ:ಮಲ್ಲಿಕಾರ್ಜುನ ಬಾಳಿಕಾಯಿ ಅವರು ಸೇರಿದಂತೆ ಅಭಿಮಾನಿಗಳು, ಉಪಸ್ಥಿತರಿದ್ದರು.

# ಸಿದ್ದೇಶ್ವರ ಶ್ರೀ ಮರೆಯಲಾಗದ ಮಾಣಿಕ್ಯ: ಎ.ಎಸ್. ಆನಂದ

**ವಿಜಯಪುರ:** ಶ್ರೀ ಸಿದ್ದೇಶ್ವರ ಸ್ವಾಮೀಜಿಯವರು ಮರೆಯಲಾಗದಮಾಣಿಕ್ಯ.ಅವರುಪ್ರತಿಕ್ಷಣವೂ ನಮ್ಮ ನೆನೆಪಿನಲ್ಲಿಯೇ ಇರುತ್ತಾರೆ. ಅವರು ತೋರಿಸಿದ ದಾರಿಯಲ್ಲಿ ನಾವೆಲ್ಲರೂ ಸಾಗುವ ಮೂಲಕ ಸಾರ್ಥಕದ ಜೀವನ ನಡೆಸಬೇಕು ಎಂದು ಸಾವಯವ ಕೃಷಿ ನಿಯೋಗದ ಅಧ್ಯಕ್ಷ ಎ.ಎಸ್. ಆನಂದ ಹೇಳಿದರು.

ನಗರದ ಶ್ರೀ ಜ್ಞಾನಯೋಗಾಶ್ರಮದಲ್ಲಿ ಶ್ರೀ ಸಿದ್ದೇಶ್ವರ ಅಪ್ಪಾಜಿಯವರ 2ನೇ ವರ್ಷದ ಗುರು ನಮನ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಂಡ "ಸುಧಾರಿತ ಕೃಷಿ ಪದ್ಧತಿ" ಎಂಬ ಗೋಷ್ಠಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶ್ರೀ ಸಿದ್ದೇಶ್ವರ ಅಪ್ಪಾಜಿಯವರು ಇದ್ದಾಗ ಅವರನ್ನುಭೇಟಿಮಾಡಲುಅವರಮಾತುಗಳನ್ನು ಕೇಳಲು ಮನಸ್ಸು ಮೌನವಾಗುತ್ತಿತ್ತು. ಆದರೆ ಇಂದು ಅವರು ಇಲ್ಲದಾಗ ಅದೇ ಮೌನವನ್ನು ಮುರೆದುಅವರಬಗ್ಗೆಯೇಮಾತನಾಡಬೇಕಾದ ಅನಿವಾರ್ಯತೆ ಬಂದಿದೆ. ಅವರು ಇಲ್ಲ ಎಂಬ ಮಾತು ನಂಬಲಸಾಧ್ಯ ಅವರು ನಮ್ಮ ಸುತ್ತು-ಮುತ್ತಲಿನಲ್ಲಿಯೇ ಇದ್ದಾರೆ. ನಮ್ಮ ಮಾತುಗಳನ್ನು ಕೇಳಿಸಿಕೊಳ್ಳುತ್ತಿದ್ದಾರೆ ಎಂಬ ಭಾವನೆ ಮೂಡುತ್ತದೆ ಎಂದರು.

ಇನ್ನು ಕೃಷಿಯ ಬಗ್ಗೆ ಅಪಾರ ಕಾಳಜಿ ಹೊಂದಿಂತವರು ಅಪ್ಪಾಜೀಯವರು. ಸಾವಯವ ಕೃಷಿಯ ಬಗ್ಗೆ ಸಾಕಷ್ಟು ಅರಿವನ್ನು ರೈತರಿಗೆ ಮೂಡಿಸಿದಂತವರು. ಅವರ ಮಾತಿನಂತೆ ನಾವೆಲ್ಲರೂ ಸಾವಯವ ಕೃಷಿಯ ಮಹತ್ವದ ಬಗ್ಗೆ ಅರಿಯಬೇಕಾಗಿದೆ. ರೈತರು ರಾಸಾಯನಿಕ ಗೊಬ್ಬರವನ್ನು ನಮ್ಮ ಭೂಮಿಗೆ ಹಾಕುವುದರಿಂದ ಅದರಿಂದ ಆಗುವ ನಷ್ಟದ ಬಗ್ಗೆ ಅರಿಯಬೇಕಾಗಿದೆ. ಕೃಷಿ ಬರೀ ಲಾಭದಾಯಕ ಉದ್ಯೋಗವಾದ ಪರಿಣಾಮ ಇಂದಿನ ದಿನ ನಮಗೆ ಅನ್ನ ನೀಡುವ ಭೂಮಿಗೆ, ಹಾಲು ಕೊಡುವ ಗೋವಿಗೆ, ನಮ್ಮ ಮಕ್ಕಳಿಗೂ, ನಮ್ಮ ಕುಟುಂಬಗಳಿಗೂ ವಿಷಪೂರಿತ ಆಹಾರವನ್ನು ನೀಡುತ್ತಿರುವುದು ದುರಂತದ ವಿಷಯ ಎಂದರು.

ಪತ್ರಿಕೆಗಳಲ್ಲಿ ಯಾರದ್ದೋ ಕೊಲೆ ವಿಷಯವನ್ನು ಓದಿ ಮರುಗುವ ನಾವು ಪ್ರತಿದಿನ ವಿಷಪೂರಿತ ಗೊಬ್ಬರ ಬಳಸಿ ಇಷ್ಟೊಂದು ಜೀವಿಗಳ ಜೀವನವನ್ನು ನಾವು ನಾಶ ಮಾಡುತ್ತಿದ್ದೇವೆ. ಅದರ ಬಗ್ಗೆ ಏಕೆ ನಮಗೆ ಅರಿವಾಗುತ್ತಿಲ್ಲ ಎಂದು ಹೇಳಿದರು.

ಬಯಲಲ್ಲಿ ಬಯಲಾಗಿ ಹೋಗುವುದೇ ಜೀವನ ಎಂದು ಹೇಳಿದ ಸಿದ್ದೇಶ್ವರ ಸ್ವಾಮೀಜಿಯವರ ಮಾತುಗಳು ನಮ್ಮ ಜೀವನಕ್ಕೆ ಪ್ರೇರಣೆಯಾಗಬೇಕು.ನಾವುಎಷ್ಟೇಗಳಿಸಿದರೂ, ಕೋಟಿ, ಕೋಟಿ ಕೂಡಿಟ್ಟರು ಎಲ್ಲವನ್ನು ಇಲ್ಲೆ ಬಿಟ್ಟು ಅಪ್ಪಾಜಿಯವರ ಮಾತಿನಂತೆ ಬಯಲಲ್ಲಿ ಬಯಲಾಗಿಯೇ ಹೋಗುವುದು ಶತಸಿದ್ಧ. ಹೀಗಿರುವಾಗ ಕೃಷಿಯಲ್ಲಿ ಲಾಭದಾಯಕದ ಆಸೆಗಾಗಿ ಎಲ್ಲ ಬೆಳೆಗಳಿಗೂ ವಿಷ ಸಿಂಪಡಿಸಿ ಎಲ್ಲರ ಜೀವಕ್ಕೂ ಕುತ್ತು ತರುವ ಪದ್ಧತಿ ನಿಲ್ಲಬೇಕು. ನಮ್ಮ ಸ್ವಾರ್ಥಕ್ಕಾಗಿ ಭೂಮಿಗೆ ವಿಷ ಉಣಿಸುತ್ತಿದ್ದೇವೆ. ನಿಸರ್ಗ ಜೀವಿಗಳಿಗೆ ವಿಷ ಹಾಕಿ ಪಾಪಿಗಳಾಗುತ್ತಿದ್ದೇವೆ. ಕೃಷಿ ಸಾತ್ವಿಕವಾಗಬೇಕು. ಅಂದಾಗ ಮಾತ್ರ ಈ ಭೂಮಿ ಮೇಲೆ ಒಳ್ಳೆಯದಾಗಲೂ ಸಾಧ್ಯ. ನಾವೆಲ್ಲರೂ ಯಾವ ರೈತ ತನ್ನ ಬೆಳೆಗಳಿಗೆ ವಿಷ ಸಿಂಪಡಿಸದೆ ಸಾವಯವ ಪದ್ಧತಿಯಲ್ಲಿ ಕೃಷಿ ಮಾಡುತ್ತಾನೊ ಅಂತಹವನನ್ನು ಕೈ



ಮುಗಿದು ಗೌರವಿಸೋಣ. ಅಂತಹ ರೈತರನ್ನು ನೋಡಿ ಹೆಮ್ಮೆ ಪಡುವ ಮೂಲಕ ಅವರನ್ನು ಪ್ರೋತ್ಸಾಹಿಸೋಣ. ಸಾವಯವ ಕೃಷಿ ಪದ್ಧತಿಗೆ ಬೆಂಬಲ ಸೂಚಿಸೋಣ ಎಂದರು.

ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯದ ಬೀಜ ಮತ್ತು ಸಾವಯವ ಪ್ರಮಾಣ ನಿಗಮದ ಮಾಜಿ ಅಧ್ಯಕ್ಷ ವಿಜುಗೌಡ ಪಾಟೀಲ ಮಾತನಾಡಿ, ನಮ್ಮ ಇಡೀ ಮನೆತನವೇ ಆಶ್ರಮದ ಭಕ್ತರು. ನನ್ನ ಅಜ್ಜಿ ಶ್ರೀ ಸಿದ್ದೇಶ್ವರ ಸ್ವಾಮೀಜಿಯವರ ಗುರುಗಳಾದ ಮಲ್ಲಿಕಾರ್ಜುನ ಸ್ವಾಮೀಜಿಯವರ ಪರಮ ಭಕ್ತರಾಗಿದ್ದರು. ಆ ಕಾಲದಿಂದಲೂ ಆಶ್ರಮದ ಜೊತೆ ನಮ್ಮ ಒಡನಾಟ ಮರೆಯಲಾಗದು. ಒಬ್ಬ ಗುರುವಾಗಿ ಶ್ರೀ ಸಿದ್ದೇಶ್ವರ ಸ್ವಾಮೀಜಿಯವರ ಆಶೀರ್ವಾದ ನಮ್ಮ ಮನೆಯ ಮೇಲೆ ಸದಾ ಇದೆ. ಅವರ ಆಶೀರ್ವಾದದ ಕಾರಣವೇ ಇಂದು ನಾವು ಇಷ್ಟರ ಮಟ್ಟಿಗೆ ಬೆಳೆಯಲು ಸಾಧ್ಯ ಎಂದರು. ಶ್ರೀ ಸಿದ್ದೇಶ್ವರ ಅಪ್ಪಾಜಿಯವರಿಗೆ ಲಕ್ಷಾಂತರು ಭಕ್ತರು ಜಗತ್ತಿನಾದ್ಯಂತ ಅವರನ್ನು ಪೂಜಿಸುತ್ತಾರೆ. ಅವರು ನಡೆದಾಡಿದ ಭೂಮಿಯಲ್ಲಿ ನಾವೆಲ್ಲರೂ ಜನಿಸಿದ್ದೇ ನಮ್ಮ ಪುಣ್ಯ. ಅವರ ಹಾಕಿ ಕೊಟ್ಟ ದಾರಿಯಲ್ಲಿ ನಾವೆಲ್ಲರೂ ಸಾಗಬೇಕಿದೆ. ಕೃಷಿ ಬಗ್ಗೆ ಅಪಾರ ಕಾಳಜಿ ಹೊಂದಿದ್ದ ಅಪ್ಪಾಜಿಯವರು ಯಾರಾದರೂ ರೈತರು ತಮ್ಮ ತೋಟಕ್ಕೆ ಕರೆದರೆ ಅತ್ಯಂತ ಖುಷಿಯಿಂದ ಹೋಗಿ ಅವರ ಬೆಳೆ ಪದ್ಧತಿಗೆಳಿಗೆ ಹಲವಾರು ಸಲಹೆ ಸೂಚನೆಗಳನ್ನು ನೀಡುತ್ತಿದ್ದರು, ಸಾವಯವ ಕೃಷಿಗೆ ಒತ್ತು ಕೊಡುವಂತೆ ಪ್ರೇರೆಪಿಸುತ್ತಿದ್ದರು. ಅವರ ಸಲಹೆಯಂತೆ ನಾವೆಲ್ಲರೂ ಸಾವಯವ ಕೃಷಿ ಪದ್ಧತಿಗೆ ಬೆಂಬಲ ಸೂಚಿಸಬೇಕಿದೆ ಎಂದರು.

ಇದೇ ಸಂದರ್ಭದಲ್ಲಿ ಬಬಲೇಶ್ವರದ ಪಂಚಮಸಾಲಿ ಪೀಠದ ಜಗದ್ಗುರು ಪೂಜ್ಯ ಶ್ರೀ ಮಹಾದೇವ ಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಶ್ರೀ ಮಲ್ಲಿಕಾರ್ಜುನ ಅಪ್ಪಾಜೀಯವರು ವೇದಾಂತ ಕೇಸರಿ ಎಂಬ ಬಿರುದನ್ನು ಸುಮ್ಮನೆ ಪಡೆದಿಲ್ಲ. ಪ್ರತಿ ದಿನವೂ ಸತತ ಮೂರು ಹೊತ್ತುಗಳ ಕಾಲ ಇಡೀ ಭಕ್ತ ಕುಲಕ್ಕೆ ಪ್ರವಚನ ನೀಡಿದಂತವರು ಸ್ವಾಮೀಜಿಯವರು. ಅವರ ಶಿಷ್ಯರಾಗಿ ಇಡೀ ಪ್ರಪಂಚದಾದ್ಯಂತ ಇಂಗ್ಲೀಷ್ ಸೇರಿದಂತೆ ಹಲವಾರು ಭಾಷೆಗಳಲ್ಲಿ ಜ್ಞಾನದಾಸೋಹ ಮಾಡಿದಂತವರು ಶ್ರೀ ಸಿದ್ದೇಶ್ವರ ಅಪ್ಪಾಜಿಯವರು. ಪ್ರತಿ ಹಳ್ಳಿ-ಹಳ್ಳಿಗೂ, ದೇಶ-ವಿದೇಶಕ್ಕೂ ತಮ್ಮ ಜ್ಞಾನ ಭಂಡಾರವನ್ನು ಹಂಚಿದಂತವರು. ಬದುಕು ಹೇಗಿರಬೇಕು, ಜೀವನ ಎಂದರೆ ಏನು, ಎಷ್ಟು ಸರಳವಾಗಿ ನಾವು ಬದುಕಬೇಕು, ಇದರ ಜೊತೆಗೆ ರೈತರ ಜವಾಬ್ದಾರಿ ಮತ್ತು ಕೃಷಿಯ ಮಹತ್ವದ ಬಗ್ಗೆ ನಡೆದಾಡಿಕೊಂಡೆ ಇಡೀ ಮನುಕುಲಕ್ಕೆ ತಿಳಿಸಿದ ಮಹಾತ್ಮ ಶ್ರೀ ಸಿದ್ದೇಶ್ವರ ಅಪ್ಪಾಜಿಯವರು. ಅವರ ಬಗ್ಗೆ ಮಾತನಾಡುವುದೇ ನಮ್ಮ ಪುಣ್ಯ. ನಮ್ಮ ಜೀವನ ಪಾವನವಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಜ್ಞಾನಯೋಗಾಶ್ರಮದ ಅಧ್ಯಕ್ಷ ಗುರು ಶ್ರೀ ಬಸವಲಿಂಗ ಸ್ವಾಮೀಜಿಯವರು ಆಶೀರ್ವಚನ ನೀಡಿ, ಶ್ರೀ ಸಿದ್ದೇಶ್ವರ ಸ್ವಾಮೀಜಿಯವರು ನಮ್ಮ ಜೀವನಕ್ಕೆ ದಾರಿದೀಪ. ಜಗತ್ತಿಗೆ ನಿರಂತರ ಅನ್ನ ಕೊಡುವವನು ರೈತ. ನಮ್ಮ ಜೀವನಕ್ಕೆ ರೈತರ ಕೊಡುಗೆ ಅಪಾರ. ಅಂತಹ ರೈತರ ಪ್ರಾಮುಖ್ಯತೆ ಬಗ್ಗೆ ಪೂಜ್ಯ ಶ್ರೀ ಸಿದ್ದೇಶ್ವರ ಅಪ್ಪಾಜಿಯವರು ನಮಗೆ ಸದಾಕಾಲ ತಿಳಿಸಿಕೊಟ್ಟಿದ್ದಾರೆ. ರೈತರೆಂದರೆ ಅವರಿಗೆ ಅಪಾರ ಪ್ರೀತಿ, ಗೌರವ. ಎಲ್ಲಿಯಾದರೂ ಹೋಗುವಾಗ ಹೊಲದಲ್ಲಿ ರೈತರು ಕಂಡರೆ ಅಲ್ಲಿ ನಿಂತು ಅವರನ್ನು ಮಾತನಾಡಿಸಿ ಅವರೊಂದಿಗೆ ಕೆಲ ಕಾಲ ಚರ್ಚಿಸಿ ನಂತರ ಮತ್ತೆ ವಾಪಾಸಾಗುತ್ತಿದ್ದರು. ಅಷ್ಟು ಪ್ರೀತಿಯನ್ನು ರೈತರಿಗೆ ಅಪ್ಪಾಜಿಯವರು ತೋರಿಸುತ್ತಿದ್ದರು ಎಂದರು.

ಇದೇ ಸಂದರ್ಭದಲ್ಲಿ ಪ್ರಗತಿಪರ ಸಾವಯವ ಕೃಷಿಕರ ಧರೆಪ್ಪ ಕಿತ್ತೂರ ಮಾತನಾಡಿ, ನಮ್ಮ ಜೀವನದಲ್ಲಿ ಕೃಷಿ, ಪರಿಸರ, ಆರೋಗ್ಯದ ಬಗ್ಗೆ ಅರಿವನ್ನು ಮೂಡಿಸಿದವರು ಶ್ರೀ ಸಿದ್ದೇಶ್ವರ ಅಪ್ಪಾಜಿಯವರು. ನಾನು ರೈತನಾಗಿ ಇಷ್ಟು ಸಾಧನೆ ಮಾಡಬೇಕೆಂದರೆ ಅವರೆ ಕಾರಣ. ಸಾವಯವ ಕೃಷಿಯ ಮಹತ್ವದ ಬಗ್ಗೆ ತಿಳಿಸಿ ಅದನ್ನು ನನ್ನ ತೋಟದಲ್ಲಿ ಪ್ರಯೋಗಿಸಲು ಕಾರಣ ಅಪ್ಪಾಜಿಯವರು. ನನ್ನ ಕೃಷಿ ತೋಟಕ್ಕೆ ಭೇಟಿ ನೀಡಿ ನನಗೆ ಸಾಕಷ್ಟು ಸಲಹೆ ನೀಡಿ ನನಗೆ ಆಶೀರ್ವಾದ ಮಾಡಿದ್ದರು. ಅವರು ನಮ್ಮ ಮನದಲ್ಲಿ ಎಂದೆಂದಿಗೂ ಅಮರರು ಎಂದು ಹೇಳಿದರು.

ಇನ್ನೋರ್ವ ರೈತ ರಾಜಶೇಖರ ನಿಂಬರಗಿ ಮಾತನಾಡಿ, ಅಪ್ಪಾಜೀಯವರು ರೈತರ ಬಗ್ಗೆ ಅಪಾರ ಕಾಳಜಿ ಹೊಂದಿದಂತವರು. ಕೃಷಿಯ ಮಹತ್ವದ ಬಗ್ಗೆ ಇಡೀ ಮನುಕುಲಕ್ಕೆ ತಲುಪಿಸಿದಂತವರು.ಅವರಸಲಹೆಸೂಚನೆಗಳು ಕೃಷಿಕರಿಗೆ ಸಾಕಷ್ಟು ಸಹಕಾರಿಯಾಗಿವೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕಾರ್ಯಕ್ರಮಕ್ಕೂ ಮುನ್ನ ಹಂತಿಪದಗಳನ್ನು ಹಾಡಿ ಜಾನಪದ ಕಲೆಯನ್ನು ಮರುಕಳಿಸಿದ ರೈತರನ್ನು ಆಶ್ರಮದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ಸಮಯದಲ್ಲಿ ವಿವಿಧ ಮಠಾಧೀಶರು, ಪೂಜ್ಯರು, ರೈತ ಮುಖಂಡರು, ನಾಯಕರು, ಸಾವಿರಾರು ಭಕ್ತಾಧಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕ ಸುಭಾಷ ಕನ್ನೂರ ಪ್ರಾಸ್ತಾವಿಕ ನುಡಿಗಳನ್ನಾಡಿದರು, ಸಾಹಿತಿ ಜಂಬುನಾಥ ಕಂಚ್ಯಾಣಿ ಸ್ವಾಗತಿಸಿದರು, ಶಿಕ್ಷಕ ಅಶೋಕ ಹಂಚಲಿ ನಿರೂಪಿಸಿದರು.

# ಗ್ರಾಮ ಪಂಚಾಯತಿಯ ಗಣಕಯಂತ್ರ ನಿರ್ವಾಹಕರ ಕಾರ್ಯ ಶ್ಲಾಘನೀಯ: ಪ್ರಕಾಶ್ ವಿ.

**ಕೊಪ್ಪಳ :** ಪ್ರಸಕ್ತದಲ್ಲಿ ಎಲ್ಲಾ ಸೇವೆಗಳು ಗಣಕಿಕೃತವಾಗಿರುವದರಿಂದ ಗ್ರಾಮ ಪಂಚಾಯತಿ ಹಂತದಲ್ಲಿ ಗ್ರಾಮ ಪಂಚಾಯತಿಯ ಆಪರೇಟರ್ ಪಾತ್ರ ಶ್ಲಾಘನೀಯವಾಗಿದೆಂದು ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಪ್ರಕಾಶ್ ವಿ ಹೇಳಿದರು.

ಅವರು ಗುರುವಾರ ಕೊಪ್ಪಳ ತಾಲೂಕ ಪಂಚಾಯತಿಯ ಸಭಾಂಗಣದಲ್ಲಿ ಆಯೋಜಿಸಿದ್ದ ಗ್ರಾಮ ಪಂಚಾಯತಿಯ ಕಂಪ್ಯೂಟರ್ ಆಪರೇಟರ್ ದಿನಾಚರಣೆಯ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಕಂಪ್ಯೂಟರ್ ಪಿತಾಮಹರೆಂದೆ ಖ್ಯಾತರಾದ ಚಾರ್ಲ್ಸ್ ಬ್ಯಾಬೇಜ್ ಕಂಪ್ಯೂಟರ್ ಕಂಡು ಹಿಡಿದ ಪರಿಣಾಮವಾಗಿ ಎಲ್ಲಾ ಇಲಾಖೆಗಳಲ್ಲಿ ಮಾಹಿತಿಯು ಗಣಕೀಕರಣವಾಗಿರುವರಿಂದ ಇಲಾಖೆಯ ಸೇವೆಗಳ ಮಾಹಿತಿ, ಜಗತ್ತಿನ ಬಗ್ಗೆ ಮಾಹಿತಿಯನ್ನು ನಾವು ಒಂದು ಕ್ಷಣದಲ್ಲಿ ಪಡೆಯಬಹುದಾಗಿದೆ. ಗ್ರಾಮ ಪಂಚಾಯತಿಯಲ್ಲಿ ಎಲ್ಲಾ ಸೇವೆಗಳು ಆನ್‌ಲೈನ್ ಇರುವದರಿಂದ ಗ್ರಾಮ ಪಂಚಾಯತಿಯಿಂದ ಸಾರ್ವಜನಿಕರಿಗೆ ಹಲವಾರು ಸೇವೆಗಳು ಸಕಾಲದಲ್ಲಿ ದೊರೆಯುತ್ತಿವೆ. ಈ ಮುಂಚೆ ಗ್ರಾಮ ಪಂಚಾಯತಿಯಲ್ಲಿ ಕೈ ಬರವಣಿಗೆಯ ರೂಪದಲ್ಲಿ ದಾಖಲಾತಿಗಳು ಲಭ್ಯವಿದ್ದವು. ಮಹಾತ್ಮಾ ಗಾಂಧಿ ನರೇಗಾ ಯೋಜನೆ ಜಾರಿಯಾದಾಗಿನಿಂದ ಪ್ರತಿ ಗ್ರಾಮ ಪಂಚಾಯತಿಯ ಕಂಪ್ಯೂಟರ್ ಆಪರೇಟರ್ ಹುದ್ದೆ ಅವಶ್ಯವಿದ್ದ ಪ್ರಯುಕ್ತ ಈ ಹುದ್ದೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹೊಸದಾಗಿ ಸೃಜಿಸಿತು. ಇದರ ಪರಿಣಾಮವಾಗಿ



ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಗಣಕಯಂತ್ರ ನಿರ್ವಾಹಕರ ನೇಮಕಾತಿ ಮಾಡಿಕೊಳ್ಳಲಾಯಿತು. ಗ್ರಾಮ ಪಂಚಾಯತಿಯಿಂದ ದೊರೆಯುವ ಎಲ್ಲಾ ಸೇವೆಗಳು ಸಕಾಲದಲ್ಲಿ ಎಲ್ಲರಿಗೂ ದೊರೆಯುವಂತಾಗಬೇಕಾದರೆ ನೀವುಗಳು ಸದಾ ಸಿದ್ದರಾಗಿರಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕೊಪ್ಪಳ ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ ಮಾತನಾಡಿ, ಚಾರ್ಲ್ಸ್ ಬ್ಯಾಬೇಜ್ ಅವರ ಪಾತ್ರ ಗಣನೀಯವಾಗಿರುತ್ತದೆ. ಗಣಕಯಂತ್ರ ನಿರ್ವಾಹಕರು ಪ್ರಸಕ್ತ ಕೆಲಸದಲ್ಲಿ ಹೆಚ್ಚು ಆಸಕ್ತಿವಹಿಸಿ ನಿರ್ವಹಿಸುತ್ತಿರುವರಿಂದ ಎಲ್ಲಾ ಯೋಜನೆಗಳು ತಾಲೂಕಿನಲ್ಲಿ ಪ್ರಗತಿ ಸಾಧಿಸಲಾಗುತ್ತಿದೆ. ಇದೇ ರೀತಿಯಾಗಿ ನೀವು ಹೆಚ್ಚಿನ ರೀತಿಯಲ್ಲಿ ತೊಡಗಿಸಿಕೊಂಡು ಎಲ್ಲಾ ಯೋಜನೆಗಳಲ್ಲಿ ಕೊಪ್ಪಳ ತಾಲೂಕು ಹೆಚ್ಚು ಪ್ರಗತಿ ಸಾಧಿಸಲು ಕಾರ್ಯನಿರತರಾಗಬೇಕೆಂದು ಕರೆ ನೀಡಿದರು.

ಚಾರ್ಲ್ಸ್ ಬ್ಯಾಬೇಜ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಸ್ಮರಿಸಲಾಯಿತು. ನಂತರ ಕೇಕ್ ಕತ್ತರಿಸುವ ಮೂಲಕ ಕಂಪ್ಯೂಟರ್ ಆಪರೇಟರ್ ದಿನ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ತಾ.ಪಂ ಸಹಾಯಕ ನಿರ್ದೇಶಕ ಯಂಕಪ್ಪ, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಮಹೇಶ್, ತಾಲೂಕ ಯೋಜನಾಧಿಕಾರಿ ರಾಜೇಸಾಬ ನದಾಫ್, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ ಸೇರಿದಂತೆ ಮತ್ತಿತರರಿದ್ದರು.

ಬಿಸರಳ್ಳಿ ಗ್ರಾಮ ಪಂಚಾಯತಿಯ ಕಂಪ್ಯೂಟರ್ ಆಪರೇಟರ್ ನಿಸಾರ ಅಹಮದ್ ಅವರು ಕಾರ್ಯಕ್ರಮದ ಕುರಿತು ಮಾತನಾಡಿದರು. ವಂದನಾರ್ಪಣೆಯನ್ನು ಗೊಂಡಬಾಳ ಗ್ರಾಮ ಪಂಚಾಯತಿಯ ಡಿಇಒ ಮಾರುತಿ ಹಣವಾಳ ನಿರ್ವಹಿಸಿದರು. ತಾಲೂಕಿನ ಎಲ್ಲಾ ಗ್ರಾಮ ಪಂಚಾಯತಿಗಳ ಕಂಪ್ಯೂಟರ್ ಆಪರೇಟರ್ಗಳು, ಭಾಗವಹಿಸಿದ್ದರು.

# ಬೆಂಗಳೂರಲ್ಲಿ ಬೀರೇಶ್ವರ ಸೊಸೈಟಿ ನೂತನ ಶಾಖೆಗಳು ಉದ್ಘಾಟನೆ

**ಬೆಂಗಳೂರು :** ಬೆಳಗಾವಿ ಜಿಲ್ಲೆ ಚಿಕ್ಕೋಡಿ ತಾಲೂಕಿನ ಯಕ್ಸಂಬಾದ ಶ್ರೀ ಬೀರೇಶ್ವರ ಕೋ–ಆಪರೇಟಿವ್ ಕ್ರೆಡಿಟ್ ಸೊಸೈಟಿ ಇದೀಗ ಬೆಂಗಳೂರಿನಲ್ಲೂ ತನ್ನ ಶಾಖೆಗಳನ್ನು ತೆರೆದಿದ್ದು, ಬಸವೇಶ್ವರನಗರ ಮತ್ತು ನೆಲಮಂಗಲದ ಎರಡು ಶಾಖೆಗಳಿಗೆ ಶನಿವಾರ ಚಾಲನೆ ನೀಡಲಾಯಿತು.



ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಮಾಜಿ ಸದಸ್ಯ ಅಣ್ಣಾ ಸಾಹೇಬ್ ಜೊಲ್ಲೆ ಸ್ಥಾಪಕರಾಗಿರುವ, ಮಾಜಿ ಸಚಿವೆ ಮತ್ತು ಶಾಸಕಿ ಶಶಿಕಲಾ ಜೊಲ್ಲೆ ಸಹ ಸಂಸ್ಥಾಪಕರಾಗಿರುವ ಶ್ರೀ ಬೀರೇಶ್ವರ ಕೋ–ಆಪರೇಟಿವ್ ಕ್ರೆಡಿಟ್ ಸೊಸೈಟಿ ತನ್ನ 223ನೇ ಶಾಖೆಯನ್ನು ಬೆಂಗಳೂರಿನ ಬಸವೇಶ್ವರನಗರದಲ್ಲಿ ಮತ್ತು 224ನೇ ಶಾಖೆಯನ್ನು ನೆಲಮಂಗಲದಲ್ಲಿ ಸ್ಥಾಪಿಸಿದೆ.

ಬಸವೇಶ್ವರನಗರ ಶಾಖೆಯನ್ನು ಉದ್ಘಾಟಿಸಿದ ಬಿಜೆಪಿ ರೈತ ಮೋರ್ಚಾದ ರಾಜ್ಯ ಉಪಾಧ್ಯಕ್ಷೆ ಭಾರತಿ ಮಲ್ಲಿಕಾರ್ಜುನ ಮಾತನಾಡಿ, ಬೀರೇಶ್ವರ ಕೋ–ಆಪರೇಟಿವ್ ಸೊಸೈಟಿಯು ಖಾಸಗಿ ಬ್ಯಾಂಕ್ ಗಳಿಗೂ ಮೀರಿದ ಸೌಲಭ್ಯಗಳನ್ನು ತನ್ನ ಗ್ರಾಹಕರಿಗೆ ಒದಗಿಸುತ್ತಿರುವದರಿಂದ ಈ ಮಟ್ಟಕ್ಕೆ ಬೆಳೆದು ನಿಂತಿದೆ ಮತ್ತು ಮೂರು ರಾಜ್ಯಗಳಲ್ಲಿ 224 ಶಾಖೆಗಳನ್ನು ಆರಂಭಿಸಲು ಸಾಧ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಸೊಸೈಟಿಯ ಬೆಳವಣಿಗೆಯಲ್ಲಿ ಜೊಲ್ಲೆ ದಂಪತಿಯ ಸೇವೆಯನ್ನು ಶ್ಲಾಘಿಸಿದ ಅವರು, ಯಾವುದೇ ಒಂದು ಸಂಸ್ಥೆ, ಅದರಲ್ಲೂ ಮುಖ್ಯವಾಗಿ ಸಹಕಾರ ಕ್ಷೇತ್ರದಲ್ಲಿ ಒಂದು ಸಂಸ್ಥೆ ಈ ಮಟ್ಟಕ್ಕೆ ಬೆಳೆಯಬೇಕಾದರೆ ಅದ ಹಿಂದೆ ಅಪಾರ ಶ್ರಮ ಮತ್ತು ಬದ್ಧತೆ ಅಗತ್ಯವಿದೆ. ಜತೆಗೆ ಸಂಸ್ಥೆಯು ಗ್ರಾಹಕರಿಗೆ ನೀಡುವ ಸವಲತ್ತುಗಳೂ ಮುಖ್ಯವಾಗುತ್ತದೆ. ಈ ಸವಲತ್ತುಗಳನ್ನು ಬಳಸಿಕೊಂಡು ಸೊಸೈಟಿಯನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಬೇಕು ಎಂದು ಕರೆ ನೀಡಿದರು.

ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷರೂ ಆಗಿರು ಕಿಮ್ಸ್ ವೈದ್ಯಕೀಯ ಕಾಲೇಜಿನ ಛೇರ್ ಮೆನ್ ಡಾ.ಟಿ.ಎಚ್.ಆಂಜಿನಪ್ಪ ಮಾತನಾಡಿ, ಶ್ರಮಿಕ ವರ್ಗಕ್ಕೆ ಸಹಾಯ ಮಡುತ್ತಾ ಸೊಸೈಟಿ ಈ ಮಟ್ಟಕ್ಕೆ ಬೆಳೆದಿದೆ. ಈ ಸೇವೆಯನ್ನು ಇನ್ನಷ್ಟು ಪರಿಣಾಕಾರಿಯಾಗಿ ಅನುಷ್ಠಾನಗೊಳಿಸಿ, ಕಷ್ಟ ಇರುವವರಿಗೆ ಸಹಾಯ ಮಾಡುವಂತೆ ನೋಡಿಕೊಳ್ಳಲು ಹಣ ಇದ್ದವರು ಇಲ್ಲಿ ತಮ್ಮ ಠೇವಣಿ ಮೊತ್ತವನ್ನು ಹೆಚ್ಚಿಸಬೇಕು ಎಂದು ಮನವಿ ಮಾಡಿದರು.

ಶ್ರೀ ಬೀರೇಶ್ವರ ಕೋ–ಆಪರೇಟಿವ್ ಕ್ರೆಡಿಟ್ ಸೊಸೈಟಿಯ ಪ್ರಭಾ ಪ್ರಧಾನ ವ್ಯವಸ್ಥಾಪಕರಾದ ಬಹದ್ದೂರ್ ಗುರವ್ ಮತನಾಡಿ, ಅಣ್ಣಾ ಸಾಹೇಬ್ ಜೊಲ್ಲೆ ಮತ್ತು ಶಶಿಕಲಾ ಜೊಲ್ಲೆ ಅವರ ಪುತ್ರ ಜ್ಯೋತಿ ಪ್ರಸಾದ್ ಜೊಲ್ಲೆ ಅವರ ಜನ್ಮದಿನದ ಅಂಗವಾಗಿ ಇಂದು ಬಸವೇಶ್ವರನಗರ ಮತ್ತು ನೆಲಮಂಗಲಗಳಲ್ಲಿ ಸೊಸೈಟಿ ತನ್ನ ಶಾಖೆಗಳನ್ನು ಆರಂಭಿಸುತ್ತಿದೆ ಎಂದು ಹೇಳಿದರು.

ಕಳೆದ 35 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಶ್ರೀ ಬೀರೇಶ್ವರ ಕೋ–ಆಪರೇಟಿವ್ ಕ್ರೆಡಿಟ್ ಸೊಸೈಟಿಯು ಕರ್ನಾಟಕ ಮಾತ್ರವಲ್ಲದೆ ಗೋವ ಮತ್ತು ಮಹಾರಾಷ್ಟ್ರಗಳಲ್ಲೂ ತನ್ನ ಶಾಖೆಗಳನ್ನು ಹೊಂದಿದೆ. 4,000 ಕೋಟಿ ರೂ. ಠೇವಣಿ ಇದ್ದು, 3,100 ಕೋಟಿ ರೂ. ಸಾಲ ನೀಡಿದೆ. 4 ಲಕ್ಷಕ್ಕೂ ಹೆಚ್ಚು ಸದಸ್ಯರಿರುವ ಈ ಸೊಸೈಟಿ, ದಕ್ಷಿಣ ಭಾರತದ ಅತಿ ದೊಡ್ಡ ಬಹುರಾಜ್ಯ ಸಂಸ್ಥೆ ಎಂಬ ಹೆಗ್ಗಳಿಕೆ ಹೊಂದಿದೆ ಎಂದರು.

ಬಿಬಿಎಂಪಿ ಮಾಜಿ ಉಪಮಹಾಪೌರ ಕೆ.ರಂಗಣ್ಣ ಸೇರಿದಂತೆ ಸೊಸೈಟಿಯ ಅಧಿಕಾರಿಗಳು, ಸಿಬ್ಬಂದಿ, ಸ್ಥಳೀಯ ನಾಗರಿಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಹೆಚ್.ಆರ್.ಶ್ರೀರಾಮುಲು ಕಾಲೇಜ್ ಸುವರ್ಣ ಮಹೋತ್ಸವ ಸಭೆ



**ಗಂಗಾವತಿ :** ನಗರದ ವಿದ್ಯಾಗಿರಿಯಲ್ಲಿರುವ ಹೆಚ್.ಆರ್.ಶ್ರೀರಾಮುಲು ಪದವಿ ಕಾಲೇಜು ಹಳೇ ವಿದ್ಯಾರ್ಥಿಗಳ ಸಭೆ ಶನಿವಾರ ಹಳೇ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಎನ್.ಜಿ.ಕಾರಟಗಿಯವರ ಅಧ್ಯಕ್ಷತೆಯಲ್ಲಿ ಜರುಗಿತು. ಸಭೆಯಲ್ಲಿ ಕೆಲ ನಿರ್ಣಗಳನ್ನು ಕೈಗೊಳ್ಳಲಾಯಿತು. ಸುವರ್ಣ ಮಹೋತ್ಸವ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಹಳೇ ವಿದ್ಯಾರ್ಥಿಗಳು ಹಾಗು ಕಾಲೇಜು ಆಡಳಿತ ಮಂಡಳಿ ಸಭೆಯನ್ನು ಕರೆದು ರೂಪರೇಶ ಚರ್ಚಿಸುವುದು, ಕಾರ್ಯಚಟುವಟಿಕೆಗಾಗಿ ಉಪ ಸಮಿತಿಗಳನ್ನು ರಚಿಸಿ ಜವಬ್ದಾರಿ ನೀಡುವುದು, ಕಾರ್ಯಕ್ರಮದ ಶೇ 25ರಷ್ಟು ಖರ್ಚನ್ನು ಹಳೇವಿದ್ಯಾರ್ಥಿಗಳ ಸಂಘದಿಂದ ಭರಿಸುವುದು, ಹಳೇ ವಿದ್ಯಾರ್ಥಿಗಳು ತಮ್ಮ ಶಕ್ತಿ ಅನುಸಾರ ದೇಣಿಗೆಯನ್ನು ಸಂಘದ ಖಾತೆಗೆ ಹಾಕುವುದು, ಹೆಚ್ಚಿನ ನಿರ್ಧಾರವನ್ನು ಅಧ್ಯಕ್ಷ ಎನ್.ಜಿ.ಕಾರಟಗಿಯವರಿಗೆ ನೀಡುವ ಕುರಿತು ಒಮ್ಮತದಿಂದ ತೀರ್ಮಾನಿಸಲಾಯಿತು.

ವೇದಿಕೆಯನ್ನು ಇಂಜೀನೀಯರ್ ಕಾಲೇಜ್ ಬಳಿಯ ಮೈದಾನದಲ್ಲಿ ಹಾಕುವುದು, ರಾಜ್ಯದ ಪ್ರಮುಖರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸುವುದು, ಕಾರ್ಯಕ್ರಮವನ್ನು ಒಂದು ದಿನಕ್ಕೆ ಸೀಮಿತಗೊಳಿಸಲಾಯಿತು. ಈ ಸಂದರ್ಭದಲ್ಲಿ ಕಾಲೇಜು ಪ್ರಾಂಶುಪಾಲರಾದ ಲಲಿತಾನಾಯಕ ಬಾವಿಕಟ್ಟಿ, ಉದ್ಯಮಿ ಕನಕಮೂರ್ತಿ ಹಾಸಮುದ್ದೀನ ವಕೀಲ ದಂಪತಿಗಳು,

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರು ಹಾಗು ಚಲನಚಿತ್ರ ನಟ ನಾಗರಾಜ್ ಇಂಗಳಗಿ,

ಪ್ರಮುಖರಾದ ಸೈಯ್ಯದ್ ಅಲಿ, ಗೀರೀಶ್ ಬಳ್ಳಾರಿ, ಹೇರೂರು ಶ್ರೀನಿವಾಸ್, ಪಿ.ದಶರಥ, ರುದ್ರಪ್ಪ, ಕೆ.ಬಸಪ್ಪ ಇತರರಿದ್ದರು.

# ಕಲ್ಲಂಗಡಿ ಬೆಳೆಯ ಸುಧಾರಿತ ಬೇಸಾಯ ಕ್ರಮಗಳ ಕುರಿತು ರೈತರಿಗೆ ಸಲಹೆಗಳು

**ಕೊಪ್ಪಳ :** ಕಲ್ಲಂಗಡಿ ಬೆಳೆಯ ಸುಧಾರಿತ ಬೇಸಾಯ ಕ್ರಮಗಳ ಕುರಿತು ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದಿಂದ ಜಿಲ್ಲೆಯ ರೈತರಿಗೆ ಅಗತ್ಯ ಸಲಹೆಗಳನ್ನು ನೀಡಲಾಗಿದೆ.

ಕೊಪ್ಪಳ ಜಿಲ್ಲೆಗೆ ಕಲ್ಲಂಗಡಿ ಒಂದು ಮುಖ್ಯವಾದ ಕುಂಬಳ ಜಾತಿಯ ಅತ್ಯಂತ ಲಾಭದಾಯದ ಅಲ್ಪಾವಧಿ ಬೆಳೆಯಾಗಿದೆ. ಇತ್ತೀಚೆಗೆ ಕಲ್ಲಂಗಡಿಯನ್ನು ವರ್ಷಪೂರ್ತಿ ಬೆಳೆಯಲಾಗುತ್ತಿದ್ದು, ಹಲವಾರು ಕಂಪನಿಗಳು ಬೀಜೋತ್ಪಾದನೆಯಲ್ಲಿ ತೊಡಗಿಸಿಕೊಂಡಿವೆ.

ಕಲ್ಲಂಗಡಿ ಒಂದು ಚಳಿಗಾಲದ ಬೆಳೆಯಾಗಿದ್ದು, ಅಕ್ಟೋಬರ್ ನಿಂದ ಜನವರಿವರೆಗೂ ಉತ್ತಮ ಇಳುವರಿ ಪಡೆಯಬಹುದಾಗಿದೆ. ಶ್ರೀ ಗವಿಸಿದ್ದೇಶ್ವರ ಜಾತ್ರೆಗೆ ಹಣ್ಣುಗಳು ಬರುವಂತೆ ಯೋಜನೆ ಹಾಕಿಕೊಂಡಲ್ಲಿ ರೈತರಿಗೆ ಹೆಚ್ಚಿನ ಲಾಭದೊರೆಯುತ್ತದೆ. ಕಲ್ಲಂಗಡಿಯನ್ನು ಸಾಮಾನ್ಯವಾಗಿ ಮಸಾರಿ ಮತ್ತು ಮರಳು ಮಿಶ್ರಿತ ಕಪ್ಪು ಮಣ್ಣು ಮತ್ತು ನೀರು ಬಸಿದು ಹೋಗುವ ಮಣ್ಣು ಮತ್ತು ಕೆರೆ ಹಾಗೂ ನದಿ ತೀರ ಪ್ರದೇಶಗಳಲ್ಲಿ ಉತ್ತಮವಾಗಿ ಬೆಳೆಯಬಹುದಾಗಿದೆ. ಮಣ್ಣಿನ ರಸ ಸಾರ 6 ರಿಂದ 7, ಉಷ್ಣಾಂಶ 15 ಡಿ.ಸೆ. ಯಿಂದ 40 ಡಿ.ಸೆ., ಆರ್ದ್ರತೆ ಶೇ. 60 ರಿಂದ 70 ಮತ್ತು ಮಳೆಯ ಪ್ರಮಾಣ 200 ಮಿ.ಮಿ. ಯಿಂದ 650 ಮಿ.ಮಿ., ಹೆಚ್ಚು ಉಷ್ಣ ಹಾಗೂ ಬಿಸಿಲು ಇರುವ ವಾತಾವರಣ ಸೂಕ್ತ.

ಕಲ್ಲಂಗಡಿಯಲ್ಲಿ ಮುಖ್ಯವಾದ ತಳಿಗಳಲ್ಲಿ ಎರಡು ವಿಧಗಳಿವೆ. ನಾಮಧಾರಿತರಹದ ತಳಿಗಳು, ಕಪ್ಪು ಬಣ್ಣದ ಕೆಂಪು ಮತ್ತು ಕಡು ಕೆಂಪು ತಿರುಳು ಹೊಂದಿರುವ ತಳಿಗಳು.



ಅಲ್ಲದೇ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯಿಂದ ಅರ್ಕಾ ಮಾಣಿಕ್ ಮತ್ತು ಅರ್ಕಾ ಮುತ್ತು ಎನ್ನುವ ತಳಿಗಳು ಪ್ರಮುಖವಾಗಿವೆ. ಇದಲ್ಲದೇ ಅನೇಕ ಖಾಸಗಿ ಕಂಪನಿಗಳ ಸಂಕರಣ ತಳಿಗಳು ಮಾರುಕಟ್ಟೆಯಲ್ಲಿ ಲಭ್ಯವಿರುತ್ತವೆ. ಕಲ್ಲಂಗಡಿ ಬೆಳೆಯನ್ನು 2.5 ಮೀ ರಿಂದ 3 ಮೀ * 1 ಮೀ ಅಂತರದಲ್ಲಿ ಏರು ಮಡಿ ಮಾಡಿ ಪ್ಲಾಸ್ಟಿಕ್ ಹೊದಿಕೆ ಹಾಕಿ ಬೆಳೆಯುವುದು ಆಧುನಿಕ ಪದ್ಧತಿಯಾಗಿದೆ. ಇದರಿಂದ ಕೀಟ ಮತ್ತು ರೋಗಗಳ ಪರಿಣಾಮಕಾರಿ ನಿಯಂತ್ರಣ ಮಾಡಬಹುದಾಗಿದೆ. ಎಕರೆಗೆ ಬೇಕಾಗುವ ಬೀಜಗಳ ಪ್ರಮಾಣ ಸಂಕರಣ ತಳಿಗಳಾದಲ್ಲಿ 300 ರಿಂದ 400 ಗ್ರಾಂ ಮತ್ತು ಇತರೆ ತಳಿಗಳಾದಲ್ಲಿ 750 ಗ್ರಾಂ. ಆದಷ್ಟು ಕೊಟ್ಟಿಗೆ ಮತ್ತು ಸಾವಯವ ಗೊಬ್ಬರ ಅಲ್ಲದೇ ಎರೆಹುಳು ಗೊಬ್ಬರಗಳನ್ನು ಜೈವಿಕ ಗೊಬ್ಬರಗಳಾದ ಟ್ರೈಕೊಡರ್ಮ, ಸೂಡೊಮೋನಾಸ್ ಮತ್ತು ವ್ಯಾಮ್ ನೊಂದಿಗೆ ಸಮೃದ್ಧಿಗೊಳಿಸಿ ಬಳಸುವುದರಿಂದ ರೋಗ ಮತ್ತು ಕೀಟದ ಬಾಧೆಯನ್ನು ತಡೆಗಟ್ಟಬಹುದು.

ಪ್ರತಿ ಎಕರೆಗೆ 1 ಕ್ವಿ. ಬೇವಿನ ಹಿಂಡಿ ಬೆರೆಸುವುದು ಸೂಕ್ತ. ಬಿತ್ತನೆ ಮಾಡಿದ 20 ರಿಂದ 30 ದಿನಗಳೊಳಗೆ ಕುಡಿ ಚಿವುಟುವದರಿಂದ ಹೆಚ್ಚಿನ ಇಲುಕುಗಳು ಬಿಟ್ಟು ಇಳುವರಿ ಹೆಚ್ಚಾಗುವುದು ಅಲ್ಲದೇ ಕೀಟಗಳ ಬಾಧೆಯನ್ನು ತಡೆಗಟ್ಟಬಹುದು. ಬಳ್ಳಿಗೆ 7 ರಿಂದ 8 ಗಿಣ್ಣುಗಳ ಬಿಡುವ ಹೂವುಗಳು ಫಲಪ್ರದವಾಗಿರುತ್ತವೆ ಮತ್ತು 11 ಗಿಣ್ಣಿನ ನಂತರ ಬರುವ ಹೆಣ್ಣು ಹೂವುಗಳನ್ನು ತೆಗೆಯುವುದು ಸೂಕ್ತ.

ಹೆಚ್ಚಿನ ಇಳುವರಿಗಾಗಿ ಸಲಹೆ: ಹೆಚ್ಚಿನ ಇಳುವರಿಗಾಗಿ ಕೆಲವು ಸಲಹೆಗಳನ್ನು ಅನುಸರಿಸಲು ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ವಿಜ್ಞಾನಿಗಳು ತಿಳಿಸುತ್ತಾರೆ. ಥ್ರಿಪ್ಸ್ ನುಸಿಯನ್ನು ಆರಂಭ ಹಂತದಿಂದಲೇ ನಿಯಂತ್ರಿಸುವುದು ಬಹಳ ಮುಖ್ಯ. ಕಸ ರಹಿತ ತೋಟ ಕೀಟಗಳನ್ನು ಹತೋಟಿ ಮಾಡುತ್ತದೆ. ಹೊಲದ ಸುತ್ತಲೂ 1 ತಿಂಗಳ ಮೊದಲೇ ಮೆಕ್ಕೆ ಜೋಳ ಅಥವಾ ಸಜ್ಜೆ ಬೀಜಗಳನ್ನು 4 ಸಾಲು ಬಿತ್ತನೆ ಮಾಡಬೇಕು. ಎರಡು ವರ್ಷಗಳ ನಂತರ ಬೆಳೆ ಪರಿವರ್ತನೆ ಮಾಡಬೇಕು ಇದಕ್ಕಾಗಿ ದ್ವಿದಳ ಧಾನ್ಯಗಳನ್ನು ಬೆಳೆಯುವುದು ಸೂಕ್ತ. ಕೀಟ ನಾಶಕಗಳನ್ನು ಬಳಸುವಾಗ ಬಳ್ಳಿಗಳ ತುದಿಗಳ ಮೇಲೆ ಸಿಂಪಡಿಸಬೇಕು. 2 ರಿಂದ 3 ಬಾರಿ ಬಳ್ಳಿಯ ತುದಿಗಳನ್ನು ಅಂತರ ವ್ಯಾಪಿ ಕೀಟ ನಾಶಕಗಳಲ್ಲಿ ಅದ್ದಿ ತೆಗೆಯಬೇಕು.

ಎಕರೆಗೆ 4 ರಿಂದ 6 ಹಳದಿ ಮತ್ತು ನೀಲಿ ಬಣ್ಣದ ಅಂಟು ಕಾರ್ಡುಗಳನ್ನು ಬಳಸಬೇಕು. ಲಘು ಪೋಷಕಾಂಶಗಳಾದ ಬೋರಾನ್ ಮತ್ತು ಕ್ಯಾಲ್ಸಿಯಂನ್ನು ತಜ್ಞರ ಸಲಹೆಯಂತೆ ಬಳಸಬೇಕು. ನೀರಿನ ನಿರ್ವಹಣೆ ಬಹಳ ಮುಖ್ಯವಾಗಿರುವುದರಿಂದ ಹೂವಾಡವು ಹಂತದಲ್ಲಿ, ಹಣ್ಣು ಬಿಡುವ ಹಂತದಲ್ಲಿ ಮತ್ತು ಹಣ್ಣು ಬಲಿಯುವ ಹಂತದಲ್ಲಿ ಮಣ್ಣನ್ನು ಆದರಿಸಿ ನೀರು ಕೊಡಬೇಕು. ಬಿತ್ತನೆ, ನಾಟಿ ಮಾಡಿದ 15 ದಿನಗಳ ನಂತರ ನೀರಿನಲ್ಲಿ ಕರಗುವ ಗೊಬ್ಬರಗಳನ್ನು ಸಿಂಪಡಿಸುವುದರಿಂದ ಹೆಚ್ಚಿನ ಇಳುವರಿಯನ್ನು ಪಡೆಯಬಹುದಾಗಿದೆ. ಪ್ರತಿ ಎಕರೆಗೆ 1 ರಿಂದ 2 ಜೇನು ಪೆಟ್ಟಿಗೆಗಳನ್ನು ಇಡುವುದರಿಂದ ಉತ್ತಮ ಇಳುವರಿ ಪಡೆಯಬಹುದು. ಪ್ರತಿ ಬಳ್ಳಿಗೆ 2 ಆರೋಗ್ಯಯುತ ಕಾಯಿಗಳನ್ನು ಬಿಟ್ಟು ಉಳಿದವುಗಳನ್ನು ಕತ್ತರಿಸಬೇಕು. ಕಾಯಿಗಳು ನಿಂಬೆಹಣ್ಣಿನ ಗಾತ್ರದಲ್ಲಿದ್ದಾಗ ಜಿಬ್ಬರ್ಲಿಕ್ ಆಮ್ಲ 20 ಪಿ.ಪಿ.ಎಮ್. ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕೊಪ್ಪಳ ಕೃಷಿ ವಿಸ್ತರಣಾ ಕೇಂದ್ರದ ವಿಸ್ತರಣಾ ಮುಂದಾಳು ಡಾ. ಎಂ.ವಿ.ರವಿ ಮೊ.ನಂ. 9480247745 ಮತ್ತು ಸಹಾಯಕ ಪ್ರಾಧ್ಯಾಪಕ ವಾಮನಮೂರ್ತಿ ಮೊ.ನಂ. 8217696837 ಇವರನ್ನು ಸಂಪರ್ಕಿಸಬಹುದಾಗಿದೆ.

# ಏಡ್ಸ್ ರೋಗಿಗಳಿಗೆ ಧೈರ್ಯ ತುಂಬೋಣ: ಡಾ. ಸವಡಿ



**ಗಂಗಾವತಿ :** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೊಪ್ಪಳ ಹಾಗೂ ಜಿಲ್ಲಾ ಜಿಲ್ಲಾ ಟಾಸ್ಕ್ ಪೋರ್ಸ್ ಸಮಿತಿ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವಿಕೆ ಕೊಪ್ಪಳ ಮತ್ತು ಉಪವಿಭಾಗ ಆಸ್ಪತ್ರೆ ಗಂಗಾವತಿ ಇವರ ಸಂಯೋಗದಲ್ಲಿ ಆಸ್ಪತ್ರೆ ಆವರಣದಲ್ಲಿ ವಿಶ್ವ ಏಡ್ಸ್ ದಿನಾಚರಣೆಗೆ ಚಾಲನೆ ನೀಡಲಾಯಿತು.

ನಂತರ ಮಾತನಾಡಿದ ಉಪವಿಭಾಗ ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿಗಳಾದ ಡಾ.ಈಶ್ವರ ಶಿ,ಸವಡಿ ಏಡ್ಸ್ ರೋಗಿಗಳಿಗೆ ಧೈರ್ಯ ತುಂಭೋಣ ಈ ಬಗ್ಗೆ ಜಾಗೃತಿ ಮೂಡಿಸೋಣ ಇಂದು ವಿಶ್ವ ಏಡ್ಸ್ ದಿನ. ಹಲವರ ಜೀವ ಬಲಿ ಪಡೆದಿರುವ ಈ ರೋಗದ ವಿರುದ್ಧ ಜಾಗೃತಿ ಮೂಡಿಸಬೇಕಾಗಿರುವುದು ಬಹಳ ಅಗತ್ಯ. ಸೂಕ್ತ ಶಿಕ್ಷಣ ಮತ್ತು ಜಾಗೃತಿಯಿಂದ ಈ ರೋಗದ ವಿರುದ್ಧದ ಹೋರಾಟಕ್ಕೆ ಇನ್ನಷ್ಟು ಬಲ ತರಲು ಸಾಧ್ಯ ಏಡ್ಸ್ ಹೀಗೆಂದ ತಕ್ಷಣ ಎಲ್ಲರೂ ಬೆಚ್ಚಿಬೀಳುತ್ತಾರೆ. ಸುಮಾರು ನಾಲ್ಕು ದಶಕಗಳಿಂದ ಹೆಚ್ಐವಿ/ಏಡ್ಸ್ ಪ್ರಪಂಚದಾದ್ಯಂತ ಗಂಭೀರವಾದ ಆರೋಗ್ಯ ಸಮಸ್ಯೆಯಾಗಿ ಪರಿಣಮಿಸಿದೆ. ಇಷ್ಟು ವರ್ಷದಲ್ಲಿ ಸಾಕಷ್ಟು ಮಂದಿ ಈ ಕಾಯಿಲೆಗೆ ಬಲಿಯಾಗಿದ್ದಾರೆ.

ಗಂಗಾವತಿ ತಾಲೂಕಿನಲ್ಲಿರುವ 3 ಸಾವಿರ ಏಡ್ಸ್ ರೋಗಿಗಳು ಇದ್ದಾರೆ,ನಮ್ಮ ಸರ್ಕಾರಿ ಆಸ್ಪತ್ರೆಯಲ್ಲಿ ಈ ತಿಂಗಳಲ್ಲಿ ಐದು ಜನ ಏಡ್ಸ್ ಇದ್ದ ಮಹಿಳೆಯರಿಗೆ ಡಿಲೇವರಿ ಮಾಡಲಾಯಿತು ಹಾಗೂ ಜತೆಗೆ, ಈ ರೋಗ ಮತ್ತು ರೋಗಿಗಳ ಬಗ್ಗೆ ಒಂದಷ್ಟು ತಪ್ಪು ತಿಳುವಳಿಕೆಗಳೂ ಇವೆ. ಇಂತಹ ತಪ್ಪು ತಿಳುವಳಿಕೆಗಳನ್ನು ದೂರ ಮಾಡಿ ಏಡ್ಸ್ ರೋಗಿಗಳಿಗೆ ಧೈರ್ಯ ತುಂಬುವ, ಈ ಹೋರಾಟದಲ್ಲಿ ಅವರಿಗೆ ಬಲವಾಗಿ ನಿಲ್ಲುವುದು ಕೂಡಾ ಎಲ್ಲರ ಜವಾಬ್ದಾರಿ. ಆಗ ಮಾತ್ರ ಏಡ್ಸ್ ವಿರುದ್ಧದ ಹೋರಾಟಕ್ಕೆ ಇನ್ನಷ್ಟು ಬಲ ಬರುವುದರಲ್ಲಿ ಸಂಶಯವೇ ಇಲ್ಲ ಉಪವಿಭಾಗ ಆಸ್ಪತ್ರೆಯಿಂದ ಬ್ಯಾಂಡ್ ಮೇಳ ಕೋಲಾಟ ಕಲಾತಂಡ ಹೆಜ್ಜೆ ಮೇಳದೊಂದಿಗೆ ಬಸವಣ್ಣ ಸರ್ಕಲ್,ಮಲ್ಲಿಕಾರ್ಜುನ ಮಠ ಬಸ್ಟ್ಯಾಂಡ ಶ್ರೀ ಕೃಷ್ಣ ದೇವರಾಯ ಸರ್ಕಲ್ ನಲ್ಲಿ ಜಾಥಾ ಮುಕ್ತಾಯಗೊಳ್ಳುವುದು ಎಂದರು.

ಗಂಗಾವತಿ ಡಿವೈಎಸ್ಪಿ ಸಿದ್ದಲಿಂಗಪ್ಪಗೌಡ ಪಾಟೀಲ್ ಮಾತನಾಡಿ ಶಿಕ್ಷಣ ಮತ್ತು ಸೂಕ್ತ ಜಾಗೃತಿಯಿಂದ ಮಾತ್ರ ಏಡ್ಸ್ ಬಗೆಗಿನ ಸಂದೇಹ, ತಪ್ಪು ತಿಳುವಳಿಕೆಯನ್ನು ದೂರ ಮಾಡಲು ಸಾಧ್ಯ. ಜತೆಗೆ, ಈ ಕಾಯಿಲೆಯಿಂದ ಬಳಲುತ್ತಿರುವವರಿಗೆ ಪ್ರೀತಿ ತೋರಿ ಈ ಹೋರಾಟದಲ್ಲಿ ಅವರಿಗೆ ಧೈರ್ಯ ತುಂಬುವ, ಮಾನಸಿಕವಾಗಿ ಕುಗ್ಗದಂತೆ ಮಾಡುವ ಕೆಲಸವನ್ನೂ ಎಲ್ಲರೂ ಮಾಡಬೇಕಾಗಿದೆ. ಇಂತಹ ಜಾಗೃತಿಗೆ ಇದು ಸಕಾಲವಾಗಿದೆ. ಇದೇ ಉದ್ದೇಶದಿಂದ ಡಿಸೆಂಬರ್ 1 ರಂದು ವಿಶ್ವ ಏಡ್ಸ್ ದಿನವನ್ನು ಆಚರಣೆ ಮಾಡಲಾಗುತ್ತದೆ. ಏಡ್ಸ್ನಿಂದ ಬಳಲುತ್ತಿರುವವರು ಎದುರಿಸುತ್ತಿರುವ ಕಳಂಕ, ತಾರತಮ್ಯದ ಭಾವನೆಯನ್ನು ದೂರ ಮಾಡಿ ಒಗ್ಗಟ್ಟಾಗಿ ಏಡ್ಸ್ ಮುಕ್ತ ಸಮಾಜದ ನಿರ್ಮಾಣ ಮಾಡುವ ಸಲುವಾಗಿ ಈ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷ 'ಅಸಮಾನತೆಗಳನ್ನು ದೂರವಾಗಿಸಿ, ಏಡ್ಸ್ ಅನ್ನು ಕೊನೆಗೊಳಿಸಿ' ಘೋಷವಾಕ್ಯದಿಂದ ಏಡ್ಸ್ ದಿನವನ್ನು ಆಚರಣೆ ಮಾಡಲಾಗುತ್ತಿದೆ. ಈ ದಿನದಂದು ಹಂಚಿಕೊಳ್ಳುವ ಸಂದೇಶಗಳು ಇಲ್ಲಿವೆ. ಏಡ್ಸ್ನಿಂದ ಈಗಾಗಲೇ ಸಾಕಷ್ಟು ಜನ ಪ್ರಾಣ ಕಳೆದುಕೊಂಡಿದ್ದಾರೆ. ಹೀಗಾಗಿ, ಶಿಕ್ಷಣ ಮತ್ತು ರೋಗದ ಬಗ್ಗೆ ಸಮರ್ಥ ಜಾಗೃತಿಯಿಂದ ನಾವು ಈ ಕಾಯಿಲೆಯನ್ನು ದೂರ ಮಾಡಬಹುದು ಎಂದು ಸಾರ್ವಜನಿಕರಿಗೆ ಇಂತಹ ಜಾಗೃತಿಗೆ ಇದು ಸಕಾಲ. ಏಡ್ಸನ್ನು ಈ ಪ್ರಪಂಚದಿಂದ ದೂರ ಮಾಡಲು ಒಗ್ಗಟ್ಟಾಗಿ ಪ್ರಯತ್ನಿಸೋಣ. ಏಡ್ಸ್ನಿಂದ ಪ್ರೀತಿ ನೀಡೋಣ, ಈ ಕಾಯಿಲೆ ವಿರುದ್ಧದ ಹೋರಾಟಕ್ಕೆ ಬಲ ತುಂಬೋಣ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷ ಮೌಲಾಸಾಬ, ನಗರ ಯೋಜನಾ ಪ್ರಾದಧಿಕಾರ ಅಧ್ಯಕ್ಷ ಸೈಯದ್ ಖಾದ್ರಿ,ಗಂಗಾವತಿ ನಗರ ಪೊಲೀಸ್ ಠಾಣೆ ಪಿಐ ಪ್ರಕಾಶ ಮಾಳಿ,ಆರೋಗ್ಯ ರಕ್ಷಾ ಸಮಿತಿ ಸದಸ್ಯರಾದ ಮಲ್ಲಿಕಾರ್ಜುನ ತಟ್ಟಿ, ಹೊನ್ನೂರುಸಾಬ,ಚಂದ್ರಶೇಖರ, ಶರಣಪ್ಪ,ಡಾ. ರವೀಂದ್ರನಾಥ, ಡಾ.ನಂದಕುಮಾರ, ತಾಲೂಕು ವೈದ್ಯಾಧಿಕಾರಿಗಳಾದ ಡಾ. ಗೌರಿ ಶಂಕರ್,ಡಾ. ನಾಗರಾಜ್ ಡಾ. ಮಲ್ಲಿಕಾರ್ಜುನ ನರ್ಸಿಂಗ್ ಹೋಮ್,ಡಾ.ಮೇಧಾ ಡಾ.ಮಲ್ಲನಗೌಡ, ಎ ಎಸ್ ಎನ್ ರಾಜು,ಡಾ. ಸತೀಶ್ ರಾಯ್ಕರ್, ಡಾ.ಬಸವರಾಜ ಅಯ್ಯೋದ್ಯ, ಡಾ.ಸುನೀಲ್ ಅರಳಿ, ಸಾದಿಯ,ಡಾ.ಶರಣ ಬಸವ,ಡಾ.ಅಬಿದಾ ಹುಸೇನ್, ವಿಜಯಗೌಡ, ಗುರುರಾಜ ಉಮಚಗಿ, ಆಶಾ ಕಾರ್ಯಕರ್ತೆ ಸೇರಿದಂತೆ ಇತರರು ಇದ್ದರು.

# ನವಲಗುಂದ ತಾಲ್ಲೂಕು ಕೃಷಿಕ ಸಮಾಜದ ಪದಾಧಿಕಾರಿಗಳ ಆಯ್ಕೆ

**ನವಲಗುಂದ :** ನಗರದ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ನವಲಗುಂದ ತಾಲ್ಲೂಕು ಕೃಷಿಕ ಸಮಾಜದ ಅಧ್ಯಕ್ಷ ಉಪಾಧ್ಯಕ್ಷ ಸೇರಿ ಪದಾಧಿಕಾರಿಗಳ ಆಯ್ಕೆ ನಡೆಯಿತು.

ಕೃಷಿ ಇಲಾಖೆಗೆ ಸಂಬಂಧಪಟ್ಟ ಕೃಷಿಕ ಸಮಾಜ ಕಾರ್ಯಕಾರಿ ಸಮಿತಿ ಚುನಾವಣೆಯ ಅಧ್ಯಕ್ಷ ಸ್ಥಾನಕ್ಕೆ ಸೋಮಲಿಂಗಪ್ಪ ಬಳಿಗೇರ, ಉಪಾಧ್ಯಕ್ಷ ದಾವಲಸಾಬ್ ಖುದ್ದಣ್ಣವರ, ಪ್ರಧಾನ ಕಾರ್ಯದರ್ಶಿ ಸ್ಥಾನಕ್ಕೆ ನಾಗನಗೌಡ ಪಾಟೀಲ್, ಖಜಾಂಚಿ ಸ್ಥಾನಕ್ಕೆ ಪ್ರಕಾಶ ಶಿಗ್ಲಿ ಮಾತ್ರ ನಾಮಪತ್ರ ಸಲ್ಲಿಸಿ ಅವಿರೋಧವಾಗಿ ಆಯ್ಕೆಯಾದರೆ ಜಿಲ್ಲಾ ಪ್ರತಿನಿಧಿ ಸ್ಥಾನಕ್ಕೆ ಎಸ್ ಆರ್ ಅಂಬಲಿ ಹಾಗೂ ಬಸಪ್ಪ ಗುಡೆಣ್ಣವ್ವರ ನಾಮಪತ್ರ ಸಲ್ಲಿಸಿದ್ದರಿಂದ ಜಿಲ್ಲಾ ಸ್ಥಾನಕ್ಕೆ



ಕೈ ಎತ್ತುವ ಮೂಲಕ ಚುನಾವಣೆ ನಡೆಸಿದ್ದರಿಂದ 11 ಮತ ಪಡೆದು ಬಸಪ್ಪ ಗುಡೆಣ್ಣವ್ವರ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಯಾಗಿದ್ದ ಕೃಷಿ ಇಲಾಖೆ ಸಹಾಯಕ ನಿರ್ದೇಶಕರಾದ ತಿಪ್ಪೇಸ್ವಾಮಿ ವಿ ಘೋಷಣೆ ಮಾಡಿದರು. ನಂತರ ಆಯ್ಕೆಯಾದ ನೂತನ ಪದಾಧಿಕಾರಿಗಳಿಗೆ ಆದೇಶ ಪ್ರತಿ ನೀಡಿ ಸನ್ಮಾನಿಸಲಾಯಿತು.

ಈ ವೇಳೆ ಕೃಷಿಕ ಸಮಾಜದ ನೂತನ ಅಧ್ಯಕ್ಷ ಸೋಮಲಿಂಗಪ್ಪ ಬಳಿಗೇರ ಮಾತನಾಡಿ ನನ್ನ ಅವಧಿಯಲ್ಲಿ ಸರ್ಕಾರ ಹಾಗೂ ಕೃಷಿ ಇಲಾಖೆಯಿಂದ ದೊರೆಯುವ ಸವಲತ್ತುಗಳನ್ನು ಪಕ್ಷಾತೀತ ಹಾಗೂ ಜಾತ್ಯಾತೀತವಾಗಿ ಕೃಷಿಕರ ಮನೆ ಬಾಗಿಲಿಗೆ ತಲುಪಿಸುವ ಕೆಲಸ ಮಾಡುತ್ತೇನೆ. ಎಲ್ಲ ನಿರ್ದೇಶಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ರೈತರಿಗೆ ಉಪಯುಕ್ತವಾದ ಕೆಲಸಗಳನ್ನು ಮಾಡಿಕೊಡಲು ಶ್ರಮಿಸಲಾಗುವುದು. ನನ್ನ ಆಯ್ಕೆಗೆ ಸಹಕರಿಸಿದ ಎಲ್ಲ ನಿರ್ದೇಶಕರು, ಸದಸ್ಯರು ಹಾಗೂ ಮುಖಂಡರಿಗೆ ಕೃತಜ್ಞತೆ ಸಲ್ಲಿಸಿದರು.

ಖಾಸಿಂಸಾಬ್ ಅಲ್ಲಿಬಾಯಿ, ಆರ್ ಎಚ್ ಕೋನರಡ್ಡಿ, ವಿರೂಪಾಕ್ಷಪ್ಪ ಲಟ್ಟಿ, ಕರಿಯಪ್ಪ ನರಗುಂದ,

ಸಿದ್ದಪ್ಪ ಮರಿಸಿದ್ದಣ್ಣವವರ, ಶಿವಾನಂದ ಭೂಮನ್ನವರ, ನಿಂಗಪ್ಪ ತಳವಾರ, ಶಂಕರಗೌಡ ಪಾಟೀಲ್, ಚಂದ್ರಗೌಡ ಗದಿಗೆಪ್ಪಗೌಡ್ರ, ಸಂಗನಗೌಡ ಮುಲಿಮನಿ ಇತರರು ಉಪಸ್ಥಿತರಿದ್ದರು.

# ಶುಚಿತ್ವದಿಂದ ರೋಗಗಳನ್ನು ತಡೆಗಟ್ಟಲು ಸಾಧ್ಯ: ಶಿಫಾ ಜಮಾದಾರ



**ವಿಜಯಪುರ:** ಶುಚಿತ್ವ ಮತ್ತು ಆರೋಗ್ಯ ಪರಸ್ಪರ ಸಂಬಂಧ ಹೊಂದಿರುವದರಿಂದ ನೀವು ಶುದ್ಧವಾಗಿದ್ದರೆ ನೀವು ಅನೇಕ ಸಾಂಕ್ರಾಮಿಕ ರೋಗಗಳಿಂದ ಹೋರಾಡಬಹುದು ಮತ್ತು ತಡೆಗಟ್ಟಬಹುದು ಎಂದು ಲಾಡಲಿ ಫೌಂಡೇಶನ್ ಟ್ರಸ್ಟಿನ ರಾಯಭಾರಿ ಶಿಫಾ ಜಮಾದಾರ ಹೇಳಿದರು.

ಬುಧವಾರ ತಿಕೋಟಾ ಗ್ರಾಮದ ಕೆ.ಬಿ.ಎಂ.ಪಿ.ಎಸ್. ಬಾಲಕರ ಸರಕಾರಿ ಶಾಲೆಯಲ್ಲಿ ಲಾಡಲಿ ಫೌಂಡೇಶನ್ ಟ್ರಸ್ಟ್ ವತಿಯಿಂದ ತಿಕೋಟಾ, ಬಬಲೇಶ್ವರ, ತಾಜಪೂರ ಸರಕಾರಿ ಶಾಲೆಗಳ ಎಸ್.ಡಿ.ಎಂ.ಸಿ. ಅಧ್ಯಕ್ಷ ಹಾಗೂ ಸದಸ್ಯರಿಗೆ ಸ್ವಚ್ಛತಾ ತರಬೇತಿ ಹಾಗೂ ಸ್ವಚ್ಛತಾ ಕಿಟ್ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶುಚಿತ್ವವು ನಿಮ್ಮ ದೈಹಿಕ, ಮಾನಸಿಕ ಮತ್ತು ಅಧ್ಯಾತ್ಮಿಕ ಆರೋಗ್ಯವನ್ನು ಹೆಚ್ಚಿಸುತ್ತದೆ. ಸ್ವಚ್ಛತೆಯಿಂದ ಇರುವುದು ಲೆಕ್ಕವಿಲ್ಲದಷ್ಟು ಪ್ರಯೋಜನಗಳಿವೆ. ಅಸಮರ್ಪಕ ಕುಡಿಯುವ ನೀರು ನೈರ್ಮಲ್ಯದ ಮೇಲೆ ಪರಿಣಾಮವಾಗಿ ಅನೇಕ ರೋಗಗಳಿಗೆ ಹಾಗೂ ಸಾವಿಗೆ ಕಾರಣವಾಗುತ್ತಿದೆ. ಸ್ವಚ್ಛವಾದಂತಹ ನೀರನ್ನು ಪ್ರತಿ ವಿದ್ಯಾರ್ಥಿ ಬಳಸುವುದನ್ನು ರೂಢಿಸಿಕೊಳ್ಳಬೇಕು. ಲಾಡಲಿ ಫೌಂಡೇಶನ್ ಟ್ರಸ್ಟ್ ವಿಜಯಪುರ ಜಿಲ್ಲೆಯ 21 ಸರಕಾರಿ ಶಾಲೆಯಲ್ಲಿ ಹೊಸದಾಗಿ ಅತ್ಯಾಧುನಿಕ ಶೌಚಾಲಯ ಕಟ್ಟುತ್ತಿದೆ. ಇದರ ಜೊತೆಗೆ ಒಂದು ವರ್ಷದ ಅವಧಿವರೆಗೆ ವಿದ್ಯಾರ್ಥಿನಿಯರಿಗೆ ಉಚಿತವಾಗಿ ಶಾನಿಟ್ರಿ ಪ್ಯಾಡ್‌ಗಳನ್ನು ಪೂರೈಸುತ್ತಿದೆ. ಮತ್ತು 21 ಶಾಲೆ ಮಕ್ಕಳಿಗೆ ಇದೇ ಡಿಸೆಂಬರ ಕೊನೆಯ ವಾರದಲ್ಲಿ 4000 ಶಾಲಾ ಬ್ಯಾಗಗಳನ್ನು ಉಚಿತವಾಗಿ ಹಂಚುತ್ತೇವೆ ಎಂದು ಹೇಳಿದರು.

ಲಾಡಲಿ ಫೌಂಡೇಶನ್ ಟ್ರಸ್ಟಿನ ರಾಷ್ಟ್ರೀಯ ಸಲಹೆಗಾರ ಡಾ. ಜಾವಿದ ಜಮಾದಾರ ಮಾತನಾಡಿ, ಸರಕಾರಿ ಶಾಲಾ ಸುಧಾರಣಾ ಸಮಿತಿ ಅಧ್ಯಕ್ಷ ಹಾಗೂ ಸದಸ್ಯರಿಗೆ ತರಬೇತಿ ನೀಡಿ ಶಾಲೆಯಲ್ಲಿ ಸ್ವಚ್ಛತೆ ಕಾಪಾಡಲು ಅವರ ಸೇವೆ ಬಳಸಿಕೊಳ್ಳುವ ಉದ್ದೇಶದಿಂದ ಜಿಲ್ಲೆಯಾದ್ಯಂತ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದೇವೆ. ಉತ್ತಮ ನೈರ್ಮಲ್ಯ ಉತ್ತಮ ಆರೋಗ್ಯ ಆತ್ಮವಿಶ್ವಾಸ ಮತ್ತು ಒಟ್ಟಾರೆ ಬೆಳವಣಿಗೆಗೆ ಕಾರಣವಾಗುತ್ತದೆ. ಮತ್ತು ಮಕ್ಕಳ ದೀರ್ಘ ಆರೋಗ್ಯಕರ ಜೀವನವನ್ನು ನಡೆಸಲು ಸಹಾಯ ಮಾಡಲು ಉತ್ತಮ ನೈರ್ಮಲ್ಯವು ನಿರ್ಣಾಯವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್.ಡಿ.ಎಂ.ಸಿ. ಅಧ್ಯಕ್ಷ ತಿಪ್ಪಣ್ಣ ಕೊಣ್ಣೂರ ವಹಿಸಿದ್ದರು. ತಿಕೋಟಾ ತಾಲೂಕ ಪಂಚಾಯತ ಮಾಜಿ ಅಧ್ಯಕ್ಷ ವಿಜುಗೌಡ ಪಾಟೀಲ, ಪಿ.ಕೆ.ಪಿ.ಎಸ್. ತಿಕೋಟಾ ಉಪಾಧ್ಯಕ್ಷ ಹಾಜಿಭಾಯಿ ಕೊಟ್ಟಲಗಿ, ಲಾಡಲಿ ಫೌಂಡೇಶನ್ ಟ್ರಸ್ಟ್ ಜಿಲ್ಲಾ ವ್ಯವಸ್ಥಾಪಕ ಯುಸೂಫ ಕೊಟ್ಟಲ, ಮುಖ್ಯೋಧ್ಯಾಪಕ ವಾಯ್.ಬಿ. ವಾಲಿಕಾರ, ಎಸ್.ಎಸ್. ಸಾಲಿಮಠ, ಹುಸೇನಬಾಶಾ ಮುಲ್ಲಾ, ಬಿ.ವಾಯ್. ಮೆಂಡೆಗಾರ, ಪ್ರೀತಿ ಪತ್ತಾರ, ಸರಿತಾ ಚಕ್ರಸಾಲಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ತಿಕೋಟಾ, ಬಬಲೇಶ್ವರ, ತಾಜಪೂರ ಆಯ್ದ ಸರಕಾರಿ ಶಾಲೆಗಳ ಎಸ್.ಡಿ.ಎಂ.ಸಿ. ಅಧ್ಯಕ್ಷ ಹಾಗೂ ಸದಸ್ಯರಿಗೆ ಮತ್ತು ವಿದ್ಯಾರ್ಥಿಗಳ ಪಾಲಕರಿಗೆ ಸ್ವಚ್ಛತಾ ಕಿಟ್ ವಿತರಿಸಲಾಯಿತು.

# ಗ್ಯಾರಂಟಿ ಯೋಜನೆಯಿಂದ ಬಡವರಿಗೆ ಅನುಕೂಲ: ನಾಡಗೌಡ



**ತಾಳಿಕೋಟೆ :** ಕಾಂಗ್ರೆಸ್ ಸರ್ಕಾರವು ಅಧಿಕಾರಕ್ಕೆ ಬಂದ ನಂತರ ಕೊಟ್ಟ ಆಶ್ವಾಸನೆಯಂತೆ 5 ಗ್ಯಾರೆಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿದೆ ಈ ಯೋಜನೆಯಿಂದ ಬಡವರಿಗೆ ತುಂಬಾ ಅನುಕೂಲವಾಗಿದೆ ಎಂದು ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಶಾಸಕ ಸಿ.ಎಸ್.ನಾಡಗೌಡ(ಅಪ್ಪಾಜಿ) ಅವರು ಹೇಳಿದರು.

ಸೋಮವಾರರಂದು ಪಟ್ಟಣದ ತಾಲೂಕಾ ಪಂಚಾಯತ್ ಕಾರ್ಯಾಲಯದ ಆವರಣದಲ್ಲಿ ನಡೆದ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಪ್ರಾದೀಕಾರ ಮತ್ತು ಮೇಲ್ವಿಚಾರಣಾ ಸಮಿತಿಯ ಅಧ್ಯಕ್ಷ ಸಂಗಮೇಶ ದೇಸಾಯಿ ಮತ್ತು ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಮಾತನಾಡುತ್ತಿದ್ದ ಅವರು ಗ್ಯಾರೆಂಟಿ ಯೋಜನೆಯಿಂದ ಜನರ ಕೈಯಲ್ಲಿ ಹಣ ಬಂದು ತಲುಪಿದೆ ಮತ್ತು ಮಹಿಳೆಯರಿಗೆ ಉಚಿತ ಬಸ್ ಸಾರಿಗೆ ವ್ಯವಸ್ಥೆಯಿಂದ ದೂರದ ಎಲ್ಲ ಪ್ರೇಕ್ಷಣೆಯ ಸ್ಥಳಗಳ ವಿಕ್ಷಣೆಯ ಜೊತೆಗೆ ಕೆಲಸ ಕಾರ್ಯಗಳಿಗೆ ತೆರಳಲು ಅನುಕೂಲವಾಗಿದೆ ಈ ಯೋಜನೆಯು ಸಮರ್ಪಕವಾಗಿ ಜನರಿಗೆ ಮುಟ್ಟಲಿ ಎಂಬ ಉದ್ದೇಶದಿಂದ ಎಲ್ಲ ತಾಲೂಕಾ ಕೇಂದ್ರಗಳಲ್ಲಿಯೂ ಸರ್ಕಾರವು ಕಚೇರಿಯನ್ನು ಪ್ರಾರಂಬಿಸಿದೆ ಇದಕ್ಕೆ ಅಧಿಕಾರಿಗಳು ಮತ್ತು ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರು ಜನರಿಗೆ ಯೋಜನೆಯ ಬಗ್ಗೆ ತಿಳಿ ಹೇಳಿ ಯೋಜನೆಯ ಲಾಭವನ್ನು ದೊರಕಿಸಿಕೊಡಬೇಕೆಂದರು.

ಶಾಸಕ ಸಿ.ಎಸ್.ನಾಡಗೌಡ(ಅಪ್ಪಾಜಿ) ಅವರು ಸಮಿತಿಯ ಅಧ್ಯಕ್ಷ ಸಂಗಮೇಶ ದೇಸಾಯಿ ಅವರಿಗೆ ಅಧಿಕಾರ ಪದಗ್ರಹಣ ಮಾಡಿಸಿದರು.

ಸಮಿತಿಯ ಜಿಲ್ಲಾ ಘಟಕದ ಅಧ್ಯಕ್ಷ ಇಲಿಯಾಸ ಭೋರಾಮಣಿ ಅವರು ಜಿಲ್ಲಾ ವಾರು ಮತ್ತು ತಾಲೂಕಾ ವಾರು ಗ್ಯಾರೆಂಟಿ ಯೋಜನೆಯ ಲಾಭ ಪಡೆಯುತ್ತಿರುವವ ಸಂಖ್ಯೆಗಳನ್ನು ವಿವರಿಸಿದರು.

ಇದೇ ಸಮಯದಲ್ಲಿ ಗ್ಯಾರೆಂಟಿ ಸಮಿತಿಯ ಜಿಲ್ಲಾ ಅಧ್ಯಕ್ಷ ಇಲಿಯಾಸ ಭೋರಾಮಣಿ ಮತ್ತು ತಾಲೂಕಾ ಅಧ್ಯಕ್ಷ ಸಂಗಮೇಶ ದೇಸಾಯಿ ಅವರನ್ನು ಶಾಸಕ ನಾಡಗೌಡ ಅವರು ಸನ್ಮಾನಿಸಿ ಗೌರವಿಸಿದರು.

ಈ ಸಮಯದಲ್ಲಿ ಕೆಪಿಸಿಸಿ ಸದಸ್ಯ ಬಿ.ಎಸ್.ಪಾಟೀಲ(ಯಾಳಗಿ), ಅಸ್ಕಿ ಪೌಂಡೇಶನ್ ಅಧ್ಯಕ್ಷ ಕಾಂಗ್ರೆಸ್ ಮುಖಂಡ ಸಿ.ಬಿ.ಅಸ್ಕಿ, ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ಸಿದ್ದನಗೌಡ ಪಾಟೀಲ(ನಾವದಗಿ), ಕಾರ್ಯದರ್ಶಿ ವಿಜಯಸಿಂಗ್ ಹಜೇರಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಹಿಬೂಬ ಚೋರಗಸ್ತಿ, ಪ್ರಭುಗೌಡ ಮದರಕಲ್ಲ, ಪರಶುರಾಮ ತಂಗಡಗಿ, ಶ್ರೀಮತಿ ಅಕ್ಕಮಹಾದೇವಿ ಕಟ್ಟಿಮನಿ, ಸಂಗನಗೌಡ ಪಾಟೀಲ(ಮಿಣಜಗಿ), ಶ್ರೀಮತಿ ನೀಲಮ್ಮ ಪಾಟೀಲ, ಫಯಾಜ ಉತ್ನಾಳ, ಸಂಗನಗೌಡ ಅಸ್ಕಿ, ಕಾಸೀಂ ಪಟೇಲಪಾಟೀಲ, ಶೌಕತ್ ಲಾಹೋರಿ, ಗೋಪಾಲ ಕಟ್ಟಿಮನಿ, ಮೋದಿನಸಾ ನಗಾರ್ಚಿ, ಆಸೀಫ್ ಕೇಂಭಾವಿ, ಸದ್ದಾಂ ಕುಂಟೋಜಿ, ಶಿವರಾಜ ನಾಗೂರ, ತಾಪಂ ಇಓ ನಿಂಗಪ್ಪ ಮಸಳಿ, ಹಾಗೂ ತಾಲೂಕಿನ ಗ್ರಾಂಪಂಗಳ ಅಭಿವೃದ್ಧಿ ಅಧಿಕಾರಿಗಳು, ಮೊದಲಾದವರು ಇದ್ದರು.

# ವಿಜಯಪುರ ಜಿಲ್ಲೆ ವಚನ ಸಾಹಿತ್ಯದ ತವರೂರು: ಸಾಹಿತಿ ವಿಜಯಲಕ್ಷ್ಮೀ



**ವಿಜಯಪುರ :** ಅಸಾಧಾರಣವಾದುದನ್ನು ಸಾಧಿಸಿದ ವ್ಯಕ್ತಿಯ ಅರ್ಹತೆ ಮತ್ತು ಶ್ರೇಷ್ಠತೆಗಾಗಿ ಪ್ರಶಸ್ತಿ, ಗೌರವಾಧರಗಳು ಅರಸಿ ಬಂದಾಗ ವ್ಯಕ್ತಿಯ ವಿಕಾಸ ಸಹಜ. ಅಂತಹ ಸಾಧಕರು ತಮ್ಮ ಮನಸ್ಸನ್ನು ನಿಭಾಯಿಸಿ ಗೆಲುವನ್ನು ಸಾಧಿಸಿದಾಗ ಆಗುವ ಆನಂದಕ್ಕೆ ಪಾರವೆ ಇರದು ಎಂದು ಬೆಂಗಳೂರಿನ ಸಾಹಿತಿ ವಿಜಯಲಕ್ಷ್ಮೀ ಸತ್ಯಮೂರ್ತಿ ಹೇಳಿದರು.

ಇಲ್ಲಿನ ಬಸವ ಜನ್ಮಭೂಮಿ ಪ್ರತಿಷ್ಠಾನದ ವತಿಯಿಂದ ನಗರದ ಚೇತನಾ ಕಾಲೇಜಿನ ಸಭಾಂಗಣದಲ್ಲಿ ಡಿ. 25 ರಂದು ಹಮ್ಮಿಕೊಂಡಿದ್ದ ಪ್ರತಿಷ್ಠಾನದ 14ನೇ ವಾರ್ಷಿಕೋತ್ಸವ, ರಾಜ್ಯಮಟ್ಟದ ವಚನವೈಭವ ಹಾಗೂ ರಾಷ್ಟ್ರಮಟ್ಟದ ಬಸವವಿಭೂಷಣ ಮತ್ತು ರಾಜ್ಯಮಟ್ಟದ ಬಸವಭೂಷಣ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ನಾಡಿನೊಳು ಹೆಸರಾದ ವಿಜಯಪುರ ಜಿಲ್ಲೆ ವಚನ ಸಾಹಿತ್ಯದ ತವರು, ಬಸವೇಶ್ವರರ ಜನ್ಮಸ್ಥಳವಾದ ಬಸವನಬಾಗೇವಾಡಿ ಸಮಸ್ತ ಶರಣ ಸಂಕುಲದ ಅಸ್ಮಿತೆ. ಇಂತಹ ಪಾವನಭೂಮಿಗೆ ಬಂದಿರುವುದು ನನ್ನ ಪುಣ್ಯ ಎಂದರು.

ಚಿತ್ರದುರ್ಗದ ಸಾಹಿತಿ ಶೈಲಾ ಜಯಕುಮಾರ ಮುಖ್ಯ ಅತಿಥಿಗಳಾಗಿ ಮಾತನಾಡಿ, ಹೃದಯಪೂರ್ವಕವಾಗಿ ಆರಂಭಿಸಿದ ಕೆಲಸಕ್ಕೆ ಪ್ರತಿಫಲ ಸಿಗುವಂತೆ, ನಮ್ಮ ಕರ್ತವ್ಯದಲ್ಲಿ ಶ್ರದ್ಧೆ, ಪ್ರಾಮಾಣಿಕತೆ ಇದ್ದಾಗ ಸಿಗುವ ಗೌರವ ಬೇರೆಲ್ಲೂ ಸಿಗಲಾರದು. ಸಂಸ್ಕಾರಯುತ ಜೀವನ ನಡೆಸಿದಾಗ ಸಮಾಜ ನಮ್ಮನ್ನು ಗುರುತಿಸುತ್ತದೆ. ಸಮಾಜಮುಖಿ ಕಾರ್ಯ ನಮ್ಮ ವ್ಯಕ್ತಿತ್ವವನ್ನು ವಿಕಸಿತಗೊಳಿಸುತ್ತದೆ ಎಂದರು.

ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸುರೇಶ ಶೆಡಶ್ಯಾಳ ಅತಿಥಿಗಳಾಗಿ ಮಾತನಾಡಿ, ಕಲೆ, ಸಂಸ್ಕೃತಿ, ನಾಡು-ನುಡಿ ಸೇವೆಗಾಗಿ ಮಿಡಿಯುವ ಮನಸ್ಸುಗಳಲ್ಲಿ ಛಲವಿದ್ದು ಗುರಿ ಸೇರುವ ತುಡಿತ ಇರುತ್ತದೆ. ತಮ್ಮ ನಿಸ್ವಾರ್ಥ ಸೇವೆಯನ್ನು ಕನ್ನಡ ಮಾತೆಯ ಪದತಲದಲ್ಲಿ ಅರ್ಪಿಸಿದಾಗ ಸಾರ್ಥಕಭಾವ ಮೂಡುತ್ತದೆ ಎಂದರು.

ಪಾವನ ಸಾನ್ನಿಧ್ಯ ವಹಿಸಿದ್ದ ಕೊಣ್ಣೂರಿನ ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ವಿಶ್ವವಂದ್ಯ ಬಸವೇಶ್ವರರ ಹೆಸರಿನ ಪ್ರಶಸ್ತಿ ಪಡೆದ ಸಾಧಕರ ಜನ್ಮ ಪಾವನ. ಪ್ರತಿಭೆಯನ್ನೆ ಮಾನದಂಡವಾಗಿಸಿಕೊಂಡು, ಅರ್ಹ ಪ್ರತಿಭೆಗಳಿಗೆ ಪ್ರಶಸ್ತಿ ನೀಡುವುದು ಶುದ್ಧ, ಸಿದ್ಧ ಸತ್ಕಾರ್ಯಗಳಲ್ಲೊಂದಾಗಿದೆ. ಹಾಗಾಗಿ ತನ್ನ ಹಿರಿಮೆ ಗರಿಮೆಯನ್ನು ಬಾನೆತ್ತರಕ್ಕೆ ಹಾರಿಸಿದ ಕೀರ್ತಿಗೆ ಬಸವ ಜನ್ಮಭೂಮಿ ಪ್ರತಿಷ್ಠಾನ ಸಾಕ್ಷಿಯಾಗಿದೆ. ಅಗ್ರಹಾರ ಬಾಗೇವಾಡಿಯು ಬಸವಣ್ಣನವರ ಜನನದಿಂದ ಪುನೀತವಾದ ತಾಣವಾಗಿ ವಿಜೃಂಭಿಸಿದೆ.

ಕಲೆ, ಸಾಹಿತ್ಯ, ಸಂಸ್ಕೃತಿ ಹಾಗೂ ವಚನ ಸಾಹಿತ್ಯದ ಪ್ರತಿಬಿಂಬವಾಗಿ ಪ್ರತಿಷ್ಠಾನ ಹೆಸರು ಮಾಡಿದೆ ಎಂದರು.

ಯಾದಗಿರಿ ಜಿಲ್ಲಾ ಕೇಂದ್ರ ಗ್ರಂಥಾಲಯದ ಉಪನಿರ್ದೇಶಕ ಜಯಪ್ರಕಾಶ ಎಚ್., ಸಾಹಿತಿ ಶಂಕರ ಬೈಚಬಾಳ ಅತಿಥಿಗಳಾಗಿ ಆಗಮಿಸಿದ್ದರು. ಅಧ್ಯಕ್ಷತೆ ವಹಿಸಿದ್ದ ಚೇತನಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷೆ ರಾಜಶ್ರೀ ಜುಗತಿ, ಪ್ರತಿಷ್ಠಾನದ ಸಂಚಾಲಕ ಸಾಹಿತಿ ಮುರುಗೇಶ ಸಂಗಮ ಮಾತನಾಡಿದರು.


ಯಾದಗಿರಿಯ ಜಯಪ್ರಕಾಶ ಎಚ್ (ಆಡಳಿತ), ಮಮದಾಪುರದ ಗುರುರಾಜ ಇಜೇರಿ (ಸರಕಾರಿ ಸೇವೆ), ವಿಜಯಪುರದ ಗಜಾನನ ಚೌಧರಿ (ಸಮಾಜಸೇವೆ), ಸುರೇಶ ಶೆಡಶ್ಯಾಳ (ಸಂಘಟನೆ), ಫಯಾಜ್‌ಅಹ್ಮದ ಕಲಾದಗಿ (ಸಮಾಜಸೇವೆ), ಕೆರಿಮಾಸ್ತಿಹೊಳಿಯ ನಿಂಗೌಡಾ ಪಾಟೀಲ (ರಂಗಭೂಮಿ), ಕುಮಠೆಯ ನೀಲಾ ಇಂಗಳೆ (ಶಿಕ್ಷಣ), ಮುತ್ತಗಿಯ ಚಂದ್ರಕಾಂತ ಪತ್ತಾರ (ಚಿತ್ರಕಲೆ), ಕಲಾದಗಿಯ ಡಾ. ಸುನಂದಾ ನಾಯಿಕ (ಶಿಕ್ಷಣ), ಬಬಲೇಶ್ವರದ ಬಾಪುರಾಯ ಜಂಗಮಶೆಟ್ಟಿ (ಸಮಾಜಸೇವೆ), ಚೌಡಪ್ಪ ಬೂದಿಹಾಳ (ಕೃಷಿ), ಶಿಕಾರಿಪುರದ ಕಾಂಚನ ಕುಮಾರ (ಸಮಾಜಸೇವೆ), ಬಸವವಿಭೂಷಣ ರಾಷ್ಟ್ರಪ್ರಶಸ್ತಿ ಪಡೆದರು.

ದಾವಣಗೆರೆಯ ಸಾಲಿಗ್ರಾಮ ಗಣೇಶ ಶೆಣೈ (ಪತ್ರಿಕೋದ್ಯಮ), ಚಿತ್ತರಗಿಯ ಮಂಜುನಾಥ ಸಂಗನಾಳ (ರಂಗಭೂಮಿ), ವಿಜಯಪುರದ ಶಿವಕುಮಾರ ಬಾಗಿ (ಜೀವಮಾನಸಾಧನೆ), ಸುನಿಲ ಜೈನಾಪುರ (ಸಂಘಟನೆ), ಯಂಭತ್ನಾಳದ ಶಿವಾನಂದ ಮಂಗಾನವರ (ಕೃಷಿ), ಚಡಚಣದ ನಬಿಲಾಲ ಹರನಾಳ (ಶಿಕ್ಷಣ), ಹಾಸನದ ಎಚ್. ರಾಮಣ್ಣ (ರಂಗಭೂಮಿ), ಗಣಿಯ ರವಿ ಚಿನಗುಂಡೆ (ವಿಜ್ಞಾನ), ಬೆಂಗಳೂರಿನ ಮೌಲಾಲಿ ಬೋರಗಿ (ಸಾಹಿತ್ಯ), ಚಿತ್ರದುರ್ಗದ ಶೈಲಾ ಜಯಕುಮಾರ (ಸಾಹಿತ್ಯ), ಹತ್ತರಕಿಹಾಳದ ಭೀಮರಾಯಗೌಡ ಬಿರಾದಾರ (ರಂಗಭೂಮಿ), ಬಸವಭೂಷಣ ರಾಜ್ಯಪ್ರಶಸ್ತಿ ಪಡೆದರು.

ಇದೇ ಸಂದರ್ಭದಲ್ಲಿ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾ ಶಾಖೆಗೆ ನಿರ್ದೇಶಕರಾಗಿ ಆಯ್ಕೆಯಾದ ನಾಗರಾಜ ಎಮ್ಮಿಯವರನ್ನು ಸನ್ಮಾನಿಸಲಾಯಿತು.

ಶಿಕ್ಷಕ ಮಲ್ಲಿಕಾರ್ಜುನ ತೊದಲಬಾಗಿ, ಸಾಹಿತಿ ತಾರಾಮತಿ ಪಾಟೀಲ ನಿರ್ವಹಿಸಿದರು. ಗೀತಾ ವೈದ್ಯ ಪ್ರಾರ್ಥಿಸಿದರು. ಪ್ರೊ.ಎ.ಎಚ್. ಕೊಳಮಲಿ ಸ್ವಾಗತಿಸಿದರು. ಪ್ರೊ. ಮಲ್ಲಿಕಾರ್ಜುನ ಅವಟಿ ನಿರೂಪಿಸಿದರು. ಸಾಹಿತಿ ಬಸನಗೌಡ ಬಿರಾದಾರ ವಂದಿಸಿದರು.

# ಹಾಗಲಕಾಯಿಯ ಆರೋಗ್ಯಕಾರಿ ಪ್ರಯೋಜನಗಳು



ಹಾಗಲಕಾಯಿ ಹಲವು ರೀತಿಯಲ್ಲಿ ನಮ್ಮ ದೇಹಕ್ಕೆ ಉತ್ತಮವಾಗಿದೆ. ಪ್ರಮುಖವಾಗಿ ಇದರ ನಿಯಮಿತ ಸೇವನೆಯಿಂದ ಯಕೃತ್‌ನಲ್ಲಿ ಸಂಗ್ರಹವಾಗಿದ್ದ ವಿಷಕಾರಿ ವಸ್ತುಗಳನ್ನು ಹೊರಹಾಕಲು ಸಾಧ್ಯವಾಗುತ್ತದೆ. ಇದರ ನಿಯಮಿತ ಸೇವನೆಯಿಂದ ಮುಖದ ಮೊಡವೆಗಳೂ ಕಲೆ ನೀಡದೇ ಮಾಗಲು ಸಾಧ್ಯವಾಗುತ್ತದೆ.

ಟೈಪ್ 2 ಮಧುಮೇಹವನ್ನು ಗುಣಪಡಿಸಲು ಸಮರ್ಥವಿರುವ ಸಿದ್ಧ ಆಹಾರವೆಂದರೆ ಅದು ಪ್ರಥಮವಾಗಿ ಹಾಗಲಕಾಯಿ, ಆದರೆ ಇದರ ಕಹಿರುಚಿಯನ್ನು ಸಹಿಸುವ ಮನಸ್ಸಾಗಬೇಕು ಅಷ್ಟೇ. ಹಾಗಲಕಾಯಿಯನ್ನು ತರಕಾರಿಯ ರೂಪದಲ್ಲಿ ಸೇವಿಸುವುದಕ್ಕಿಂತ ಹೆಚ್ಚು ಪರಿಣಾಮವನ್ನು ಅದರ ಜ್ಯೂಸ್ ಮಾಡಿಕೊಂಡು ಕುಡಿಯುವ ಮೂಲಕ ಪಡೆಯಬಹುದು.

ರಕ್ತದಲ್ಲಿರುವ ಸಕ್ಕರೆಯ ಅಂಶವನ್ನು ತಗ್ಗಿಸುತ್ತದೆ

ಪ್ರತಿದಿನ ಬೆಳಿಗ್ಗೆ ಒಂದು ಲೋಟ ಹಾಗಲಕಾಯಿಯ ರಸವನ್ನು ಖಾಲಿಹೊಟ್ಟೆಯಲ್ಲಿ ಕುಡಿದರೆ ರಕ್ತದಲ್ಲಿ ಹೆಚ್ಚಾಗಿರುವ ಸಕ್ಕರೆಯ ಅಂಶ ಮೂರೇ ದಿನದಲ್ಲಿ ತಹಬಂದಿಗೆ ಬರುತ್ತದೆ. ವಾಸ್ತವಾಗಿ ರಕ್ತದಲ್ಲಿನ ಸಕ್ಕರೆ ಉಪಯೋಗಿಸಲ್ಪಡದೇ ವಿಸರ್ಜಿಸಲಾಗಲು ಇನ್ಸುಲಿನ್ ಪ್ರಮಾಣ ಮಹತ್ವದ ಪಾತ್ರ ವಹಿಸುತ್ತದೆ. ಈ ಪೋಷಕಾಂಶಗಳು ಇನ್ಸುಲಿನ್ ಕೊರತೆಯಾಗದಂತೆ ನೋಡಿಕೊಳ್ಳುವುದೇ ಹಾಗಲಕಾಯಿಯ ಈ ಸಾಮರ್ಥ್ಯಕ್ಕೆ ಕಾರಣವಾಗಿದೆ.

ಜೀರ್ಣಕ್ರಿಯೆಯಲ್ಲಿ ನೆರವಾಗುತ್ತದೆ: ಕೆಲವೊಮ್ಮೆ ಆಹಾರ ಜೀರ್ಣಗೊಳ್ಳಲು ಸಾಮಾನ್ಯಕ್ಕಿಂತಲೂ ಹೆಚ್ಚಿನ ಸಮಯಾವಕಾಶ ತೆಗೆದುಕೊಳ್ಳುವುದರಿಂದ ಹೊಟ್ಟೆಯಲ್ಲಿಯೇ ಉಳಿದು ಹಲವು ವಾಯುಗಳು ಉತ್ಪತ್ತಿಯಾಗಿ ಉರಿ ತರಿಸುತ್ತವೆ. ಅಜೀರ್ಣ ವ್ಯಾಧಿ ಎಂದು ಕರೆಯಲಾಗುವ ಈ ತೊಂದರೆಗೆ ಹಾಗಲಕಾಯಿಯ ರಸ ಅತ್ಯಂತ ಪರಿಣಾಮಕಾರಿಯಾಗಿದೆ. ಈ ರಸ ಹೊಟ್ಟೆಯಲ್ಲಿಳಿದ ಬಳಿಕ ಜೀರ್ಣರಸಗಳನ್ನು ಅಗತ್ಯ ಪ್ರಮಾಣದಲ್ಲಿ ಸ್ರವಿಸಲು ಜಠರಕ್ಕೆ ಪ್ರಚೋದನೆ ನೀಡುತ್ತದೆ. ಪರಿಣಾಮವಾಗಿ ಹುಳಿತೇಗು, ಗ್ಯಾಸ್ಟ್ರಿಕ್, ಹೊಟ್ಟೆಯ ಹುಣ್ಣು ಮೊದಲಾದ ತೊಂದರೆಗಳಿಂದ ಕಾಪಾಡಿದಂತಾಗುತ್ತದೆ. ವಾರಕ್ಕೊಮ್ಮೆ ಬೆಳಿಗ್ಗೆದ್ದ ಕೂಡಲೇ ಖಾಲಿಹೊಟ್ಟೆಯಲ್ಲಿ ಒಂದು ಲೋಟ ಹಾಗಲಕಾಯಿಯ ರಸವನ್ನು ಸೇವಿಸುವುದರಿಂದ ಆರೋಗ್ಯ ಉತ್ತಮಗೊಳ್ಳುತ್ತದೆ.

ಕಣ್ಣಿನ ದೃಷ್ಟಿಯನ್ನು ಉತ್ತಮಗೊಳಿಸುತ್ತದೆ: ಹಾಗಲಕಾಯಿಯ ರಸದಲ್ಲಿ ಬೀಟಾ-ಕ್ಯಾರೋಟೀನ್ ಮತ್ತು ವಿಟಮಿನ್ ಎ ಪೋಷಕಾಂಶಗಳು ಹೇರಳವಾಗಿರುವುದರಿಂದ ಕಣ್ಣಿಗೆ ಅಗತ್ಯವಾದ ಪೋಷಕಾಂಶಗಳು ದೊರೆತು ಕಣ್ಣಿನ ತೊಂದರೆಗಳಿಂದ ರಕ್ಷಣೆ ನೀಡಿದಂತಾಗುತ್ತದೆ. ಅಲ್ಲದೇ ಉತ್ತಮ ಪ್ರಮಾಣದಲ್ಲಿರುವ ವಿಟಮಿನ್ ಸಿ ಮತ್ತು ಆಂಟಿ ಆಕ್ಸಿಡೆಂಟುಗಳು ಮಧುಮೇಹದ ಕಾರಣದಿಂದಾಗಿ ಉತ್ಪತ್ತಿಯಾಗುವ ದೃಷ್ಟಿದೋಷದಿಂದ ಕಣ್ಣುಗಳನ್ನು ಕಾಪಾಡುತ್ತವೆ. ಹಾಗಲಕಾಯಿಯ ನಿಯಮಿತ ಸೇವನೆಯಿಂದ ಕಣ್ಣುಗಳ ಉತ್ತಮ ಆರೋಗ್ಯವನ್ನು ಕಾಪಾಡಿಕೊಂಡು ಬರಲು ಸಾಧ್ಯವಾಗುತ್ತದೆ.

ಕೆಟ್ಟ ಕೊಲೆಸ್ಟ್ರಾಲ್ ಕಡಿಮೆಮಾಡುತ್ತದೆ: ಹಾಗಲಕಾಯಿಯಲ್ಲಿ ಫೈಟೋನ್ಯೂಟ್ರಿಯೆಂಟ್‌ಗಳೆಂಬ ಆಂಟಿ ಆಕ್ಸಿಡೆಂಟುಗಳಿದ್ದು ಇವು ಕೆಟ್ಟ ಕೊಲೆಸ್ಟ್ರಾಲ್ ಕಣಗಳನ್ನು ತಮ್ಮೊಂದಿಗೆ ಅಂಟಿಸಿಕೊಂಡು ಹೋಗುವ ಕ್ಷಮತೆ ಪಡೆದಿವೆ. ಹಾಗಲಕಾಯಿಯನ್ನು ತರಕಾರಿಯ ರೂಪದಲ್ಲಿ ಆಲಿವ್ ಎಣ್ಣೆಯೊಡನೆ ಸೇವಿಸಿದರೆ ಕೊಂಚ ಕಹಿ ಎನಿಸಿದರೂ ನಿಮ್ಮ ದೇಹದಲ್ಲಿರುವ ಕೆಟ್ಟ ಕೊಲೆಸ್ಟ್ರಾಲ್ ನಿವಾರಿಸುವ ಮೂಲಕ ಆರೋಗ್ಯವನ್ನು ವೃದ್ಧಿಸುತ್ತದೆ.

ರಕ್ತವನ್ನು ಶುದ್ಧೀಕರಿಸುತ್ತದೆ: ಪ್ರತಿದಿನ ಬೆಳಿಗ್ಗೆ ಖಾಲಿಹೊಟ್ಟೆಯಲ್ಲಿ ಒಂದು ಲೋಟ ಹಾಗಲಕಾಯಿ ರಸವನ್ನು ಸೇವಿಸುವುದರಿಂದ ರಕ್ತ ಶುದ್ಧಿಗೊಂಡು ಚರ್ಮದ ವಿವಿಧ ತೊಂದರೆಗಳು ಮಾಯವಾಗಿ ಕಾಂತಿಯುಕ್ತ ಚರ್ಮ ಪಡೆಯಲು ಸಾಧ್ಯವಾಗುತ್ತದೆ. ಶುದ್ಧೀಕರಣಗೊಂಡ ರಕ್ತದ ಮೂಲಕ ಇಡಿಯ ಶರೀರ ಆರೋಗ್ಯದಿಂದ ಕಂಗೊಳಿಸುತ್ತದೆ.

ಮೊಡವೆಗಳಿಗೆ: ಹಾಗಲಕಾಯಿಯ ಸೇವನೆಯು ಮೊಡವೆಗಳ ನಿವಾರಣೆಗೆ ಸಹಕಾರಿಯಾಗಿದೆ ಮಾತ್ರವಲ್ಲದೇ ಆಳವಾದ ಚರ್ಮದ ಸೋಂಕುಗಳಿಗೂ ಶಮನಕಾರಿಯಾಗಿದೆ. ಹಾಗಲಕಾಯಿಯ ರಸವನ್ನು ನಿಂಬೆ ಹಣ್ಣಿನ ರಸದೊಂದಿಗೆ ಬೆರೆಸಿ, ಪ್ರತಿದಿನ ಖಾಲಿ ಹೊಟ್ಟೆಗೆ 6 ತಿಂಗಳುಗಳ ಕಾಲ ಸೇವಿಸಿರಿ ಇಲ್ಲವೇ ನಿಮ್ಮ ನಿರೀಕ್ಷಿತ ಫಲಿತಾಂಶ ದೊರೆಯುವವರೆಗೆ ಸೇವನೆಯನ್ನು ಮುಂದುವರೆಸಿರಿ.

ಹಾಗಲಕಾಯಿ ಜ್ಯೂಸ್ ಮಾಡುವ ವಿಧಾನ: ತಾಜಾ ಹಾಗಲಕಾಯಿಯನ್ನು ಚೆನ್ನಾಗಿ ತೊಳೆದು ಅದರ ಮೇಲ್ಭಾಗದ ಸಿಪ್ಪೆಯನ್ನು ತೆಗೆಯಿರಿ ಹಾಗೂ ಇದನ್ನು ಮಧ್ಯಭಾಗದಲ್ಲಿ ಕತ್ತರಿಸಿ ಬೀಜವನ್ನು ಚಮಚದ ಮೂಲಕ ತೆಗೆಯಿರಿ. ಸಿಪ್ಪೆಯ ಕಹಿಯನ್ನು ಸಹಿಸಿಕೊಳ್ಳಬಲ್ಲಿರೆ0ದಾದಲ್ಲಿ ಅದನ್ನು ತೆಗೆಯುವ ಅಗತ್ಯವಿಲ್ಲ. ಅನೇಕರು ಹಾಗಲಕಾಯಿಯ ಮೇಲ್ಭಾಗದ ಸಿಪ್ಪೆಯನ್ನು ತೆಗೆಯುವ ಗೋಜಿಗೇ ಹೋಗುವುದಿಲ್ಲ. ಹಾಗಲಕಾಯಿಯನ್ನು ಸಣ್ಣದಾಗಿ ತುಂಡರಿಸಿಕೊಳ್ಳಿ. ನಂತರ ಇದನ್ನು ಒಂದು ಪಾತ್ರೆಗೆ ಹಾಕಿ ಮತ್ತು ನೀರಿನಲ್ಲಿ 30 ನಿಮಿಷಗಳ ಕಾಲ ಹಾಗಲಕಾಯಿಯನ್ನು ಮುಳುಗಿಸಿಡಿ. ಬೇಕಾದಲ್ಲಿ ಸ್ವಲ್ಪ ಉಪ್ಪು ಅಥವಾ ಲಿಂಬೆ ರಸವನ್ನು ಸೇರಿಸಿ ಇದರಿಂದ ಇದರ ಕಹಿ ನಿವಾರಣೆಯಾಗುತ್ತದೆ. ಅನ0ತರ ಇವುಗಳನ್ನು ಮಿಕ್ಸರ್ ನಲ್ಲಿ ಹಾಕಿರಿ ಜೊತೆಗೆ ಅದಕ್ಕೆ ಅಗತ್ಯವಿದ್ದಷ್ಟು ನೀರನ್ನು ಸೇರಿಸಿರಿ.

# ಬೊಜ್ಜು ಕರಗಿಸಲು ಸೀಬೆ ಮದ್ದು



ಸೀಬೆ ಎಂದರೆ ಎಲ್ಲರಿಗೂ ಇಷ್ಟ. ಈ ಹಣ್ಣು ರುಚಿಯಾಗಿರುತ್ತದೆ. ಸೀಬೆಗೆ ಇನ್ನೊಂದು ಹೆಸರು ಪೇರಲ. ಮಾಗಿದಾಗ ವಿಶಿಷ್ಟ ಪರಿಮಳ ಹರಡುತ್ತದೆ. ಇದು ನೋಡಲೂ ಸಹ ಆಕರ್ಷಕವಾಗಿರುತ್ತದೆ. ಶ್ರಾವಣ ಬಂತು ಎಂದರೆ ಎಲ್ಲಿ ನೋಡಿದರೂ ಸೀಬೆಯೇ. ದೋರೆಗಾಯಿ ಇದ್ದಾಗ ಸೀಬೆಯಲ್ಲಿ ಸಿಹಿ, ಹುಳಿ ಮತ್ತು ಒಗರು ಮಿಳಿತಗೊಂಡಿದ್ದು ತಿನ್ನಲು ಬಲು ರುಚಿಯಾಗಿರುತ್ತದೆ.

ಸೀಬೆಗೆ ಸಂಸ್ಕೃತದಲ್ಲಿ ಅಮೃತಫಲಂ ಎಂದರೆ, ಹಿಂದಿಯಲ್ಲಿ ಅಮ್ರುದ್, ತೆಲುಗಿನಲ್ಲಿ ಜಾಮ, ತಮಿಳಿನಲ್ಲಿ ಕೊಯ್ಯಾಪಳಂ ಹಾಗೂ ಇಂಗ್ಲಿಷ್‌ನಲ್ಲಿ ಗೋವಾ ಎಂದು ಕರೆಯುತ್ತಾರೆ. ಸೀಬೆ ಹಣ್ಣಿನಲ್ಲಿ ಶರೀರಕ್ಕೆ ಅಗತ್ಯವಿರುವ ವಿವಿಧ ಪೋಷಕಾಂಶಗಳು ಸಾಕಷ್ಟಿವೆ. ಹಣ್ಣು ದೊರೆಯುವ ಅವಧಿಯಲ್ಲಿ ಯಥೇಚ್ಛವಾಗಿ ಬಳಸಿ ಲಾಭ ಹೊಂದಬೇಕು. ಅತ್ಯಧಿಕ ಔಷಧೀಯ ಗುಣವಿರುವ ಇದು ಹಿತ್ತಲಗಿಡ. ಇದರ ಬೆಲೆಯೂ ಕಡಿಮೆಯಿದ್ದು, ಆರೋಗ್ಯಕ್ಕೆ ಹೆಚ್ಚು ಉಪಯುಕ್ತ. ಹಸಿರು ಕಾಯಿ ಒಗರಾಗಿರುತ್ತದೆ. ದೋರೆಗಾಯಿ ಹೆಚ್ಚು ರುಚಿಯಾಗಿರುತ್ತದೆ. ಅಧಿಕ ಪ್ರಮಾಣದ ಶರ್ಕರ ಪಿಷ್ಟಗಳ ಜೊತೆಗೆ ಪ್ರೋಟೀನು, ಸುಣ್ಣ, ರಂಜಕ, ಕಬ್ಬಿಣ ಹಾಗೂ ಕ್ಯಾಲೊರಿ ಸತ್ವಗಳಿರುತ್ತವೆ. 'ಸಿ' ಅನ್ನಾಂಗದ ಜೊತೆಗೆ ಇತರ ಅನ್ನಾಂಗಗಳು ಸ್ವಲ್ಪ ಮಟ್ಟಿಗೆ ಇರುತ್ತದೆ. ದೋರೆಗಾಯಿಗಳಲ್ಲಿ ಅಧಿಕ ಪೆಕ್ಟಿನ್ ಅಂಶವಿರುತ್ತದೆ.

ಸೀಬೆಹಣ್ಣನ್ನು ರುಚಿಗೋಸ್ಕರ ಇಲ್ಲವೇ ಆಹಾರವಾಗಿ ಬಳಸುವುದು ಮಾತ್ರವಲ್ಲ, ಅದು ಉತ್ತಮ ಔಷಧಿಯ ಗುಣ ಸಹ ಹೊಂದಿದೆ. ಅಧಿಕ ಪ್ರಮಾಣದ ಪ್ರೋಟೀನು ಇರುವ ಕಾರಣ ಮಾಂಸಖಂಡಗಳನ್ನು ಬಲಪಡಿಸಬಲ್ಲದು. ನಾರಿನ ಅಂಶ ಅಧಿಕವಿರುವ ಕಾರಣ ತಿಂದ ಆಹಾರ ಕರುಳುಗಳಲ್ಲಿ ಸುಲಭವಾಗಿ ಚಲಿಸುವಂತೆ ಮಾಡಬಲ್ಲದು. ಆದ್ದರಿಂದ ಮಲಬದ್ಧತೆಗೆ ಇದು ದಿವ್ಯೌಷಧ. ಈ ಉದ್ದೇಶಕ್ಕಾಗಿ ರಾತ್ರಿ ಊಟದ ನಂತರ ಪ್ರತಿ ನಿತ್ಯ ಒಂದೆರೆಡು ಹಣ್ಣುಗಳನ್ನು ತಿಂದಲ್ಲಿ ಮುಂಜಾನೆ ಸುಖ ವಿರೇಚನ ಸಾಧ್ಯ.

ಹಣ್ಣುಗಳಲ್ಲಿರುವ ಕಬ್ಬಿಣದ ಅಂಶ ರಕ್ತ ಶುದ್ಧಿಗೆ ಸಹಾಯಕ. ಇದು 'ಸಿ' ಅನ್ನಾಂಗದ ಒಳ್ಳೆಯ ಮೂಲವಾದ್ದರಿಂದ ಹಲ್ಲಿನ ಒಸಡುಗಳು ಗಟ್ಟಿಗೊಳ್ಳುತ್ತವೆ. ಹಾಗೂ ಸ್ಕರ್ವಿ ರೋಗವನ್ನು ದೂರ ಮಾಡಬಲ್ಲದು.

ಸೀಬೆಯಲ್ಲಿ ಬೆಟಾ ಕೆರಾಟಿನ್, ಪೊಟ್ಯಾಶಿಯಂ ಮತ್ತು ಫೈಬರ್ ಅಂಶ ಹೆಚ್ಚಾಗಿರುವುದರಿಂದ ಇದು ಹೆಚ್ಚು ಉಪಯೋಗಕಾರಿಯಾಗಿದ್ದು ರಕ್ತದಲ್ಲಿನ ಸಕ್ಕರೆ ಅಂಶ ಮತ್ತು ಕೊಲೆಸ್ಟ್ರಾಲ್ ನಿಯಂತ್ರಿಸುವ ಗುಣವನ್ನು ಹೊಂದಿದೆ ಹಾಗೂ ಹೃದಯದ ಸ್ವಾಸ್ಥ್ಯವನ್ನು ಕಾಪಾಡುತ್ತದೆ.

ತೂಕ ಕಡಿಮೆ ಮಾಡಿಕೊಳ್ಳಬೇಕೆಂದಿದ್ದರೆ ಸೀಬೆ ಹಣ್ಣು ಒಳ್ಳೆ ಆಯ್ಕೆ. ಸೀಬೆಯಲ್ಲಿ ಅವಶ್ಯಕ ಕಾರ್ಬೋಹೈಡ್ರೇಟ್ ಮತ್ತು ಫೈಬರ್ ಇರುವುದರಿಂದ ಬೊಜ್ಜನ್ನು ನಿಯಂತ್ರಿಸುತ್ತದೆ. ಸೀಬೆಯಲ್ಲಿ ಕೊಬ್ಬಿನಾಂಶ ಕೇವಲ 0.9 ಇದ್ದು, 84 ಕ್ಯಾಲೊರಿ ಮಾತ್ರ ಇರುತ್ತದೆ. ಸೇಬು ಹಣ್ಣಿಗೆ ಹೋಲಿಸಿದರೆ ಸೀಬೆಯಲ್ಲಿ ಶೇ 42 ರಷ್ಟು ಕಡಿಮೆ ಕ್ಯಾಲೊರಿ ಮತ್ತು ಶೇ.38 ರಷ್ಟು ಕಡಿಮೆ ಕೊಬ್ಬಿನಾಂಶವಿದೆ.

ಮಕ್ಕಳಿಗೆ ಕೆಲವರು ಈ ಹಣ್ಣನ್ನು ತಿನ್ನಲು ಕೊಡುವುದಿಲ್ಲ ಅದಕ್ಕೆ ಕಾರಣ ಅವು ಕೆಮ್ಮನ್ನುಂಟುಮಾಡುತ್ತವೆ ಎಂಬ ಶಂಕೆ. ಆದರೆ ಇದು ತಪ್ಪು. ಎಳೆಯ ಮಕ್ಕಳಿಗೆ ಸಾಕಷ್ಟು ಹಣ್ಣನ್ನು ಕೊಡುತ್ತಿದ್ದಲ್ಲಿ 'ಸಿ' ಅನ್ನಾಂಗದ ಅಭಾವ ತಾನೇ ತಾನಾಗಿ ನಿವಾರಣೆಯಾಗುತ್ತದೆ. ನುಣ್ಣಗೆ ಕುಟ್ಟಿ ಪುಡಿಮಾಡಿದ ಎಲೆಗಳನ್ನು ಸಂಧಿವಾತದಲ್ಲಿ ಬಳಸುತ್ತಾರೆ. ಅವುಗಳ ತಿಳಿರಸ ಅಪಸ್ಮಾರಕ್ಕೆ ಒಳ್ಳೆಯ ಔಷಧಿ. ಎಲೆಗಳನ್ನು ಕುದಿಸಿ ತೆಗೆದ ನೀರನ್ನು ಮುಕ್ಕಳಿಸುತ್ತಿದ್ದಲ್ಲಿ ಒಸಡುಗಳ ಊತ ಮತ್ತು ಹಲ್ಲು ನೋವು ತಗ್ಗುತ್ತದೆ.

ಸೀಬೆ ಮರದ ಎಲೆಗಳನ್ನು ಅರೆದು ಗಾಯ ಹಾಗೂ ವ್ರಣಗಳಿಗೆ ಪಟ್ಟು ಹಾಕುವುದುಂಟು.

# ಬೆಣ್ಣೆಯಲ್ಲಿರುವ ಆರೋಗ್ಯಕರ ಗುಣಗಳು



ಬೆಣ್ಣೆಯಲ್ಲಿರುವ ಕೊಬ್ಬಿನಂಶವಾದ ಗ್ಲೈಕೋಸ್ಫಿಂಗೊಲಿಪಿಡ್ಸ್ ಜಠರಕ್ಕೆ ಬ್ಯಾಕ್ಟಿರಿಯಾ ಸೋಂಕು ತಾಗದಂತೆ ರಕ್ಷಣೆ ಮಾಡುತ್ತದೆ. ದೇಹದಲ್ಲಿ ವಿಟಮಿನ್ ಎ ಕೊರತೆಯಿಂದ ಥೈರಾಯ್ಡ್‌ಬರುತ್ತದೆ. ಆದರೆ ಬೆಣ್ಣೆಯಲ್ಲಿ ವಿಟಮಿನ್ ಎ ಅಧಿಕ ಇರುವುದರಿಂದ ಥೈರಾಯ್ಡ್ ಗ್ರಂಥಿ ಸರಿಯಾಗಿ ಕಾರ್ಯನಿರ್ವಹಿಸುವಂತೆ ಮಾಡುತ್ತದೆ. ಬೆಣ್ಣೆಯಲ್ಲಿ ವೂಲ್ಜನ್ ಫ್ಯಾಕ್ಟರ್ ಎಂಬ ಅಂಶವಿದ್ದು ಇದು ಮೂಳೆಗಳ ಆರೋಗ್ಯಕ್ಕೆ ತುಂಬಾ ಒಳ್ಳೆಯದು. ತುಪ್ಪ ಹಾಗೂ ಬೆಣ್ಣೆ ಎರಡೂ ಆರೋಗ್ಯಕರವಾದ ಆಹಾರವಾಗಿದ್ದು ಅದರಲ್ಲಿರುವ ಪೋಷಕಾಂಶಗಳು ತುಂಬಾ ಒಂದೇ ರೀತಿ ಇದೆ. ತುಪ್ಪ ಹಾಗೂ ಬೆಣ್ಣೆ ಅದರದೇ ಆದ ರುಚಿ ಹಾಗೂ ಆರೋಗ್ಯಕರ ಗುಣಗಳನ್ನು ಹೊಂದಿದ್ದು ಅವರ ಆರೋಗ್ಯಕ್ಕೆ ಯಾವುದು ಸರಿ ಅನಿಸುತ್ತದೆಯೋ ಅದನ್ನು ಬಳಸಬಹುದು. ಆದರೆ ಲ್ಯಾಕ್ಟೋಸ್ ಅಸಮತೋಲನ ಇರವವರಿಗೆ ಬೆಣ್ಣೆಗಿಂತ ತುಪ್ಪ ಅತ್ಯುತ್ತಮವಾದ ಆಹಾರವಾಗಿದೆ. ಕೆಲವರಿಗೆ ಬೆಣ್ಣೆ ತಿಂದರೆ ಅಲರ್ಜಿ ಉಂಟಾಗುತ್ತದೆ. ಅದಕ್ಕೆ ಕಾರಣ ಅದರಲ್ಲಿರುವ ಲ್ಯಾಕ್ಟೋಸ್ ಅಂಶ. ಇದರಲ್ಲಿರುವ ಹಾಲಿನ ಪ್ರೊಟೀನ್ ಲ್ಯಾಕ್ಟೋಸ್ ಅಸಮತೋಲನ ಇರುವ ವ್ಯಕ್ತಿಯಲ್ಲಿ ಗುಳ್ಳೆಗಳು, ತುರಿಕೆ, ಅಸ್ತಮಾ ಉಲ್ಬಣವಾಗುವಂತಹ ತೊಂದರೆಗಳು ಕಾಣಿಸಿಕೊಳ್ಳುವುದು.

ಆದರೆ ತುಪ್ಪದಲ್ಲಿ ಹಾಲಿನ ಯಾವುದೇ ಪ್ರೊಟೀನ್ ಅಂಶವಿಲ್ಲದಿರುವ ಕಾರಣ ಲ್ಯಾಕ್ಟೋಸ್ ಅಸಮತೋಲನ ಇರುವವರಿಗೆ ತುಪ್ಪ ಒಳ್ಳೆಯದು.

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State